# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ

**ಸುಭಾಷಿತ:**
ತಿನ್ನುವ ಅನ್ನದ ಮೇಲೆ ಅಹಂಕಾರ ಪಟ್ಟರೆ,
ರೋಗ ರುಜಿನದಿಂದ ಬಳಲುತ್ತಾನೆ..
ಹೆಣ್ಣನ್ನು ತಿರಸ್ಕಾರ ಭಾವದಿಂದ ನೋಡಿದರೆ
ಬ್ರಹ್ಮಚಾರಿಯಾಗಿಯೇ ಉಳಿಯುತ್ತಾನೆ..
ಒದಗಿ ಬಂದ ಸಂಪತ್ತನ್ನು ಕಡೆಗಣಿಸಿದರೆ
ದರಿದ್ರನಾಗಿಯೇ ಇರುತ್ತಾನೆ..
ಕಾಯಕದ ಮೇಲೆ ಪ್ರೀತಿ ತೋರದಿದ್ದರೆ
ನಿರುದ್ಯೋಗಿಯಾಗಿಯೇ ಬಾಳುತ್ತಾನೆ..
ಕುಟುಂಬ ಸಂಸಾರದಲ್ಲಿ ಒಲವು ಇಲ್ಲದಿದ್ದರೆ
ಅನಾಥನಾಗಿಯೇ ಉಳಿಯುತ್ತಾನೆ.
**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 08-08-2025 to 14-08-2025 ಬೆಲೆ: 7-00 ಸಂಪುಟ–5 ಸಂಚಿಕೆ–07 ಪುಟಗಳು–6






ದೇವಭೂಮಿ ಉತ್ತರಾಖಂಡದಲ್ಲಿ ಸಂಭವಿಸಿದ ಮೇಘಸ್ಫೋಟದ ನಂತರದ ಪ್ರವಾಹದಲ್ಲಿ ನೂರಾರು ಮಂದಿ ನಾಪತ್ತೆಯಾಗಿದ್ದಾರೆ ಎಂದು ಹೇಳಲಾಗುತ್ತಿದೆ. ಮೇಘಸ್ಫೋಟ ಸಂಭವಿಸಿದ ಬಳಿಕ ಉದ್ಭವಿಸಿದ ಭಾರಿ ಪ್ರವಾಹದಿಂದಾಗಿ ಗಂಗಾ ನದಿ ಹುಟ್ಟುವ ಸ್ಥಳದಿಂದ ಗಂಗೋತ್ರಿಗೆ ತೆರಳುವ ಹಾದಿಯಲ್ಲಿರುವ "ಧರಾಲಿ" ಗ್ರಾಮದ ಅರ್ಧದಷ್ಟು ಪ್ರದೇಶವೇ ನಾಶವಾಗಿ ಹೋಗಿದ್ದು, ಭಾರತೀಯ ಸೇನೆ ಸೇರಿದಂತೆ ಇತರೆ ರಕ್ಷಣಾ ತಂಡಗಳು ಶೋಧ ಕಾರ್ಯಾಚರಣೆ ಮಾಡಿ ಅವಶೇಷಗಳ ನಡುವೆ ಸಿಲುಕಿಕೊಂಡವರಿಗೆ ಹುಡುಕಾಟ ನಡೆಸುತ್ತಿದ್ದಾರೆ.

## ವಾಸ್ತವಾಂಶಕ್ಕೆ ಮಾತ್ರ ಮಾಧ್ಯಮ ಆದ್ಯತೆ ನೀಡಲಿ –ಡಿ.ವಿ.ಎಸ್



**ಮಂಗಳೂರು:** ತಂತ್ರಜ್ಞಾನ ಬೆಳೆದ ಬಳಿಕ ಮಾಧ್ಯಮ ಕ್ಷೇತ್ರ ವಿಸ್ತಾರವಾಗಿದೆ. ಸಮಾಜದ ವಾಸ್ತವದ ಸತ್ಯ ಸಂಗತಿಗಳನ್ನು ಜನರ ಮುಂದಿಡುವ ಕೆಲಸ ಆಗಬೇಕು. ಮಾಧ್ಯಮ ಶಕ್ತಿಯ ಸದ್ಬಳಕೆ ಇಂದಿನ ಅಗತ್ಯವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಹೇಳಿದರು. ನಗರದ ಕುದ್ಮುಲ್ ರಂಗರಾವ್ ಪುರಭವನದಲ್ಲಿ ಬುಧವಾರ ನಡೆದ ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸುವರ್ಣ ಸಂಭ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಾಮಾಜಿಕ ಜಾಲತಾಣಗಳ ಅವ್ಯಾಹತ **3ನೇ ಪುಟಕ್ಕೆ**




## ಧರ್ಮಸ್ಥಳದ ವಿರುದ್ಧ ವಿದೇಶಿ ಹಣ ಬಳಕೆ ಅನುಮಾನ –ಗಿಳಿಯಾರ್



**ಮಂಗಳೂರು:** ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ರೂಪಿಸಲು ವಿದೇಶಿ ಹಣ ಬಳಕೆ ಮಾಡಲಾಗಿದೆ ಎಂಬ ಅನುಮಾನವಿದೆ. ಈ ಪ್ರಕರಣವನ್ನು ಎನ್‌ಐಎಗೆ ವಹಿಸಬೇಕು ಎಂದು ಪುಣ್ಯ ಕ್ಷೇತ್ರ ಸಂರಕ್ಷಣಾ ಸಮಿತಿಯ ಸಂಚಾಲಕ ವಸಂತ ಗಿಳಿಯಾರ್ ಆಗ್ರಹಿಸಿದರು. ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಸುಕುಧಾರಿ ಯಾರ ಮೇಲೆ ಆರೋಪ ಮಾಡಿದ್ದಾನೆ ಎಂದು ಇನ್ನೂ ದೃಢಪಟ್ಟಿಲ್ಲ. ಹೀಗಿರುವಾಗ ಯಾವುದೇ ಸುದ್ದಿಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ, ಧರ್ಮಾಧಿಕಾರಿಗಳು, ಶ್ರೀ ಮಂಜುನಾಥ ಸ್ವಾಮಿಗಳ ಫೋಟೊ ಬಳಕೆ ತಪ್ಪು. ಅನಾಮಿಕ ಹೇಳಿರುವ ಹಾಗೆ ಅಸ್ಥಿ ದೊರೆತಿಲ್ಲ. ಆದರೆ ಕೆಲವು ಯೂಟ್ಯೂಬ್ ಚಾನೆಲ್‌ಗಳಲ್ಲಿ ಹಲವು ಶವಗಳು ಸಿಕ್ಕಿವೆ, ಅದರಲ್ಲಿ ಹೆಣ್ಣು ಮಕ್ಕಳದು ಇದೆ ಎನ್ನುವ ಸುದ್ದಿಗಳನ್ನು ಬಿತ್ತರಿಸುತ್ತಿದ್ದಾರೆ. **3ನೇ ಪುಟಕ್ಕೆ**

## ಪ್ರಧಾನಿ ಕೈಗಳನ್ನು ಕಟ್ಟಿ ಹಾಕಲಾಗಿದೆ –ರಾಗಾ



**ನವದೆಹಲಿ:** ಅದಾನಿ ವಿರುದ್ಧ ಅಮೆರಿಕದಲ್ಲಿ ನಡೆಯುತ್ತಿರುವ ಪ್ರತಿಭಟನೆಯಿಂದಾಗಿ, ಡೊನಾಲ್ಡ್ ಟ್ರಂಪ್ ಪದೇ ಪದೇ ಬೆದರಿಕೆ ಒಡ್ಡುತ್ತಿದ್ದರೂ, ಪ್ರಧಾನಿ ನರೇಂದ್ರ ಮೋದಿ ಮಾತನಾಡುತ್ತಿಲ್ಲ ಎಂದು ಲೋಕ ಸಭೆ ವಿರೋಧ ಪಕ್ಷದ ನಾಯಕ ರಾಗಾ ಆಪಾದಿಸಿದ್ದಾರೆ. ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳಲು ಮುಂದಾಗಿರುವುದರಿಂದ ಮುಂದಿನ 24 ಗಂಟೆಯಲ್ಲಿ ಭಾರತದ ಮೇಲೆ ಹೇರಿರುವ ತೆರಿಗೆಯನ್ನು ಗಣನೀಯವಾಗಿ ಏರಿಸಲಾಗುವುದು ಎಂದು ಡೊನಾಲ್ಡ್ ಟ್ರಂಪ್ ಹೇಳಿದ ಬೆನ್ನಲ್ಲೇ ರಾಹುಲ್ ಗಾಂಧಿ **3ನೇ ಪುಟಕ್ಕೆ**






# ಧರ್ಮಸ್ಥಳದ ವಿರುದ್ಧ ವಿದೇಶಿ ಹಣ ಬಳಕೆ ಅನುಮಾನ- ಗಿಳಿಯಾರ್

ಒಂದನೇ ಪುಟದಿಂದ......

ಇದರಿಂದಾಗಿ ಸಾರ್ವಜನಿಕರಲ್ಲಿ ಗೊಂದಲ ಉಂಟಾಗುತ್ತಿದೆ ಆಕ್ರೋಶ ಉಂಟಾಗಿದೆ. ಯಾವುದೇ ಮಾಧ್ಯಮವಿರಲಿ ಸಾರ್ವಜನಿಕರನ್ನು ರೊಚ್ಚಿಗೆಬ್ಬಿಸುವ ಕೆಲಸ ಮಾಡಬಾರದು ಇದರಿಂದ ಸಮಾಜದ ಶಾಂತಿಗೆಧಕ್ಕೆ ಉಂಟಾಗುತ್ತದೆ. ಒಂದೊಮ್ಮೆ ಅವರು ಬಿತ್ತರಿಸುತ್ತಿರುವ ಸುದ್ದಿ ಸುದ್ದಿ ಸತ್ಯವೇ ಆಗಿದ್ದರೆ ಅದನ್ನು ಸ್ಪಷ್ಟಪಡಿಸಲಿ. ಅದು ಸತ್ಯವಲ್ಲ ಎಂದಾದರೆ ತಕ್ಷಣವೇ ಅಂತಹ ಯುಟ್ಯೂಬ್ ಚಾನೆಲ್‌ಗಳ ಹಾಗೂ ಅದರ ಮಾಲೀಕರು ಸಿಬ್ಬಂದಿಗಳ ಮೇಲೆ ಕ್ರಮ ಜರುಗಿಸಬೇಕು ಎಂದು ಅವರು ವಿನಂತಿಸಿದರು. ಇದರೊಂದಿಗೆ ಧರ್ಮಸ್ಥಳ ಕ್ಷೇತ್ರದ ವಿರುದ್ಧ ಷಡ್ಯಂತ್ರ ನಡೆಸಲಾಗುತ್ತಿದೆ. ಹೀಗಾಗಿ ಇದೇ ತಿಂಗಳು ಧರ್ಮಸ್ಥಳ ಕ್ಷೇತ್ರದಲ್ಲಿ ಧರ್ಮ ಜಾಗರಣಾ ಸಮಾವೇಶ ನಡೆಸುತ್ತೇವೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಕೊತ್ತಾಡಿ ಶರತ್ ಶೆಟ್ಟಿ, ನಿಖಿಲ್ ನಾಯಕ್ ತೆಕ್ಕಟ್ಟೆ, ಮಹೇಶ್ ಬೈಲೂರು, ರವೀಂದ್ರ ಹೇರೂರು, ಪ್ರವೀಣ್ ಯಕ್ಷಿಮಠ, ರವಿಚಂದ್ರ ಮೊದಲಾದವರು ಉಪಸ್ಥಿತರಿದ್ದರು.

# ಪ್ರದಾನಿ ಕೈಗಳನ್ನು ಕಟ್ಟಿ ಹಾಕಲಾಗಿದೆ- ರಾಗಾ

ಒಂದನೇ ಪುಟದಿಂದ......

ಈ ಹೇಳಿಕೆ ನೀಡಿದ್ದು ಮತ್ತೊಮ್ಮೆ ಅಚ್ಚರಿ ಮೂಡಿಸಿದೆ. ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ರಾಹುಲ್‌ಗಾಂಧಿ 'ಭಾರತೀಯರು ದಯವಿಟ್ಟು ಅರ್ಥ ಮಾಡಿಕೊಳ್ಳಿ, ಡೊನಾಲ್ಡ್ ಟ್ರಂಪ್ ಪದೇ ಪದೇ ಬೆದರಿಕೆ ಹಾಕುತ್ತಿದ್ದರೂ, ಪ್ರಧಾನಿ ನರೇಂದ್ರ ಮೋದಿ ಸುಮ್ಮನಿರುವುದಕ್ಕೆ ಕಾರಣ ಅಮೆರಿಕದಲ್ಲಿ ಅದಾನಿ ವಿರುದ್ಧ ನಡೆಯುತ್ತಿರುವ ತನಿಖೆ' ಎಂದು ಬರೆದುಕೊಂಡಿದ್ದಾರೆ. ಮೋದಿ, ಎಎ ಹಾಗೂ ರಷ್ಯಾದತೈಲ ಒಪ್ಪಂದದ ನಡುವೆಇರುವ ಹಣಕಾಸು ಸಂಬಂಧವನ್ನು ಬಹಿರಂಗ ಪಡಿಸುವ ಬೆದರಿಕೆ ಅದರಲ್ಲಿ ಒಂದು. ಮೋದಿಯವರ ಕೈಗಳನ್ನು ಕಟ್ಟಿ ಹಾಕಲಾಗಿದೆ' ಎಂದು ಬರೆದುಕೊಂಡಿದ್ದಾರೆ.

# ವಾಸ್ತವಾಂಶಕ್ಕೆ ಮಾತ್ರ ಮಾಧ್ಯಮ ಆದ್ಯತೆ ನೀಡಲಿ–ಡಿ.ವಿ.ಎಸ್

ಒಂದನೇ ಪುಟದಿಂದ......

ಬಳಕೆಯಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿದೆ. ಮಾಧ್ಯಮಗಳು ವಾದ, ಪ್ರತಿವಾದ, ತೀರ್ಪು ನೀಡದೆ ತೀರ್ಮಾನ ಕೈಗೊಳ್ಳಲು ಓದುಗರ, ವೀಕ್ಷಕರಿಗೆ ಅವಕಾಶ ಕಲ್ಪಿಸಬೇಕು. ವಸ್ತುನಿಷ್ಠ, ನಿಷ್ಪಕ್ಷಪಾತವಾಗಿ ಮಾಧ್ಯಮಗಳು ಕೆಲಸ ಮಾಡಿದಾಗ ಪ್ರಭಾವಶಾಲಿಯಾಗಲು ಸಾಧ್ಯ ಎಂದರು. ಮುದ್ರಣ ಮಾಧ್ಯಮ, ದೃಶ್ಯ ಮಾಧ್ಯಮ ಹಾಗೂ ಜಾಲತಾಣ ಮಾಧ್ಯಮಗಳು ಜೊತೆಜೊತೆಯಾಗಿಯೇ ಸಾಗಬೇಕು. ಅವು ಪರಸ್ಪರ ಕಚ್ಚಾಡುವುದಲ್ಲ, ಅವುಗಳ ಸುದ್ದಿ ಆದ್ಯತೆ ಮತ್ತು ಶೈಲಿ ಬೇರೆ ಬೇರೆಯಾಗಿದ್ದರೂ ಅವುಗಳು ಒಂದಕ್ಕೊಂದು ಪೂರಕವಾಗಿದೆ ಎಂದು ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ಪ್ರಧಾನ ಸಂಪಾದಕ ರವಿ ಹೆಗಡೆ ಹೇಳಿದ್ದಾರೆ. ಮುಖ್ಯವಾಹಿನಿ ಮಾಧ್ಯಮಗಳಿಗಿಂತ ಸೋಶಿಯಲ್ ಮೀಡಿಯಾಗಳ ಪೂರ್ವಯೋಜಿತ ಪ್ರಚಾರಗಳೇ ಜಾಸ್ತಿಯಾಗುತ್ತಿದ್ದು, ಇದು ಪ್ರಜಾಪ್ರಭುತ್ವಕ್ಕೆ ಆತಂಕಕಾರಿಯಾಗಿದೆ ಎಂದರು. ಕೃತಕ ಬುದ್ಧಿಮತ್ತೆ(ಎಐ) ಭವಿಷ್ಯದ ಪತ್ರಿಕೋದ್ಯಮವಾಗಲಿದ್ದು, ಮುಂದಿನ ದಿನಗಳಲ್ಲಿ ಇದು ಇನ್ನಷ್ಟು ಪರಿಣಾಮಕಾರಿಯಾಗಿ ರೂಪುಗೊಳ್ಳಲಿದೆ. ಈ ಬೆಳವಣಿಗೆ ಪತ್ರಿಕೋದ್ಯಮವನ್ನು ಮೀಡಿಯಾಟೆಕ್(ಮಾಧ್ಯಮತಂತ್ರಜ್ಞಾನ) ಆಗಿ ಬದಲಾಯಿಸಿದೆ. ವಿಶ್ವಾಸಾರ್ಹ ಪತ್ರಿಕೋದ್ಯಮಕ್ಕಾಗಿ ಎಐ ತಂತ್ರಜ್ಞಾನವನ್ನು ಬಳಕೆ ಮಾಡಿಕೊಳ್ಳಬೇಕು ಈಗ ಯಾರೂ ಪತ್ರಿಕೋದ್ಯಮ ಎಂದು ಕರೆಯುವುದಿಲ್ಲ ಮೀಡಿಯಾಟೆಕ್ ಎನ್ನುತ್ತಾರೆ. ಪತ್ರಿಕೆ ಹಂಚಲು, ಓದಲು ಪರ್ಯಾಯ ಮಾಧ್ಯಮವನ್ನು ಜನತೆ ನೆಚ್ಚಿಕೊಳ್ಳುತ್ತಿದೆ. ಡಿಜಿಟಲ್ ವೇದಿಕೆ ಮೂಲಕ ಸುದ್ದಿ ಸಾಕಷ್ಟು ವೈರಲ್ ಆಗುತ್ತಿರುವ ಈ ಸಂಕ್ರಮಣ ಕಾಲಘಟ್ಟದಲ್ಲಿ ನಾವಿದ್ದೇವೆ

## ವಕ್ಫ್ ನೋಂದಣಿ ಸಂಸ್ಥೆಗಳ ಖರ್ಚು ವೆಚ್ಚ ವಿವರ ಸಲ್ಲಿಸಲು ಸೂಚನೆ

ಮಂಗಳೂರು – ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಕ್ಫ್ ನೋಂದಣಿಯಾಗಿರುವ ಎಲ್ಲಾ ವಕ್ಫ್ ಸಂಸ್ಥೆಗಳು ತಮ್ಮ ಸಂಸ್ಥೆಯ 2024–25ನೇ ಸಾಲಿನ ವಾರ್ಷಿಕ ಆಯ–ವ್ಯಯ (ಜಮಾ-ಖರ್ಚು)ಗಳ ಪಟ್ಟಿಯನ್ನು ಜಿಲ್ಲಾ ವಕ್ಫ್ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಪಾಂಡೇಶ್ವರದ ಓಲ್ಡ್ ಕೆಂಟ್ ರಸ್ತೆಯ ಅಲ್ಪಸಂಖ್ಯಾತರ ಕಲ್ಯಾಣ ಭವನದ 2ನೇ ಮಹಡಿಯಲ್ಲಿರುವ ಜಿಲ್ಲಾ ವಕ್ಫ್ ಕಛೇರಿ ಸಂಪರ್ಕಿಸಬಹುದು ಎಂದು ವಕ್ಫ್ ಅಧಿಕಾರಿ ತಿಳಿಸಿದ್ದಾರೆ.

# ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ನೇಕಾರರಿಗೆ ಆರ್ಥಿಕ ನೆರವು

ಮಂಗಳೂರು–ಸರ್ಕಾರದ ಯೋಜನೆಯಾದ ನೇಕಾರ್ ಸಮ್ಮಾನ್ ಯೋಜನೆಯಡಿ ಕೈಮಗ್ಗ ಹಾಗೂ ವಿದ್ಯುತ್‌ಮಗ್ಗ ನೇಕಾರರಿಗೆ ವಾರ್ಷಿಕವಾಗಿ ಒಂದು ಬಾರಿಗೆ ರೂ. 5000 ಸಹಾಯ ಧನವನ್ನು ಸರ್ಕಾರದಿಂದ ಡಿ.ಬಿ.ಟಿ ಮೂಲಕ (ನೇರಾ ನಗದು ವರ್ಗಾವಣೆ) ನೀಡಲಾಗುತ್ತಿದೆ. ಹೆಚ್ಚಿನ ಮಾಹಿತಿಗೆ ಅಥವಾ ಭರ್ತಿ ಮಾಡಿದ ಅರ್ಜಿಗಳನ್ನು ಯೆಯ್ಯಾಡಿ ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿ (ದೂ.ಸಂ.: 0824–2225056)ಗೆ ಸಲ್ಲಿಸಬೇಕು ಎಂದು ಇಲಾಖೆ ಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆ.ಎಸ್.ಆರ್.ಟಿ.ಸಿ ಅಪ್ರೆಂಟಿಸ್ ತರಬೇತಿ: ಅರ್ಜಿ ಆಹ್ವಾನ

ಮಂಗಳೂರು–ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಮಂಗಳೂರು ವಿಭಾಗದಲ್ಲಿ ಶಿಶಿಕ್ಷು ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 5 ರೊಳಗಾಗಿ ನಗರದ ಬಿಜೈನಲ್ಲಿರುವ ವಿಭಾಗೀಯ ಕಛೇರಿಗೆ ಅರ್ಜಿ ಸಲ್ಲಿಸಬೇಕು. ಸೆಪ್ಟೆಂಬರ್ 10ರಂದು ಬೆಳಿಗ್ಗೆ 10 ಗಂಟೆಗೆ ಮೂಲ ದಾಖಲಾತಿಗಳೊಂದಿಗೆ ಶಿಶಿಕ್ಷು ಆಯ್ಕೆ ಸಮಿತಿಯ ಮುಂದೆ ನೇರ ಸಂದರ್ಶನಕ್ಕೆ ಹಾಜರಾಗಬೇಕು ಎಂದು ಕೆ. ಎಸ್. ಆರ್. ಟಿ. ಸಿ. ಮಂಗಳೂರು ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಸೇವಾ ಸಂಸ್ಥೆಗಳಿಗೆ ಅನುದಾನ : ಅರ್ಜಿ ಆಹ್ವಾನ

ಮಂಗಳೂರು–ವೃದ್ಧಾಶ್ರಮ/ಅನಾಥಾಶ್ರಮ ಮತ್ತು ಎಚ್.ಐ.ವಿ./ಏಡ್ಸ್ ನಿರ್ಗತಿಕರ ಕೇಂದ್ರ ಮತ್ತು ಖಾಸಗಿ ಹಾಸ್ಟೆಲ್ ನಡೆಸುತ್ತಿರುವ ಮುಸ್ಲಿಂ, ಕ್ರಿಶ್ಚಿಯನ್ ಮತ್ತು ಜೈನ್ ಸೇವಾ ಸಂಸ್ಥೆಗಳಿಗೆ ಸಂಸ್ಥೆಗಳಲ್ಲಿ ಕನಿಷ್ಠ 25 ಫಲಾನುಭವಿಗಳಿಗಿಂತ ಹೆಚ್ಚಿರುವ ಸಂಸ್ಥೆಗಳಿಂದ ಆಹಾರ, ಔಷಧಿ ಮತ್ತು ಇತರ ವೆಚ್ಚಗಳಿಗೆ ಮತ್ತು ಖಾಸಗಿ ವಸತಿ ನಿಲಯಗಳಲ್ಲಿ ವಾಸಿಸುತ್ತಿರುವ ವಿದ್ಯಾರ್ಥಿಗಳಿಗೆ ಆಹಾರ ವೆಚ್ಚವನ್ನು ನೀಡುವ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ. 0824–2211078/ 2433078 ಸಂಪರ್ಕಿಸ ಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ ನಾಮ ನಿರ್ದೇಶಿತ ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಸಾಗರದ ಸಮಾಜ ಕಲ್ಯಾಣ ಇಲಾಖೆ ವತಿಯಿಂದ 3 ವರ್ಷದ ಅವಧಿಗೆ ಇಬ್ಬರು ಸಾಮಾಜಿಕ ಕಾರ್ಯಕರ್ತರು ಅದರಲ್ಲಿ ಓರ್ವ ಮಹಿಳೆ ಹಾಗೂ ಹಣಕಾಸು ಮತ್ತು ಪತ್ತಿನ ವ್ಯವಹಾರವನ್ನು ನಡೆಸುವ ಸಂಸ್ಥೆಗಳನ್ನು ಪ್ರತಿಸಿಧಿಸುವ ಒಬ್ಬ ವ್ಯಕ್ತಿಯನ್ನು ಉಪವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ ನಾಮನಿರ್ದೇಶನ ಮಾಡಿಕೊಳ್ಳಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಾಗರ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು, ಮೊ.ಸಂ. 9480843192, ದೂ.ಸಂ.08183–229402ನ್ನು ಸಂಪರ್ಕಿಸಬಹುದು ಎಂದು ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಕಿರುಸಾಲ ಯೋಜನೆ ಪಡೆಯಲು ಅರ್ಜಿ ಆಹ್ವಾನ

ಶಿವಮೊಗ್ಗ : ಶಿವಮೊಗ್ಗ ಜಿಲ್ಲೆಗಳ ಪರಿಶಿಷ್ಟ ಪಂಗಡದ ಸ್ತ್ರೀಶಕ್ತಿ ಮಹಿಳೆಯರನ್ನು ಗುಂಪು ಚಟುವಟಿಕೆಗಳ ಮೂಲಕ ಆರ್ಥಿಕವಾಗಿ ಸಬಲರನ್ನಾಗಿಸಲು ಕಿರುಸಾಲ ಯೋಜನೆಯಡಿ ರೂ.20.00ಲಕ್ಷಗಳ ಬಡ್ಡಿ ರಹಿತ ಸಾಲ ನೀಡಲು ಉದ್ದೇಶಿಸಿದ್ದು, ಅರ್ಹ ಗುಂಪುಗಳಿಂದ ಅರ್ಜಿ ಅಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಅಭಿವೃದ್ಧಿ ನಿಗಮ, ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿವಮೊಗ್ಗ, ದೂರವಾಣಿ ಸಂಖ್ಯೆ: 08182–295514ನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಡಿಕೇರಿ – ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ತಮ್ಮ 2025–26ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 'ಗ್ರಾಮೀಣ ಕ್ರೀಡೆಗಳಾದ ಕಂಬಳ, ಎತ್ತಿನಬಂಡಿ ಓಟ ಮತ್ತು ಮಲ್ಲಕಂಬ ಕ್ರೀಡೆಗಳಿಗೆ ಉತ್ತೇಜನ ನೀಡಲಾಗುವುದು ಎಂದು ಘೋಷಿಸಿರುತ್ತಾರೆ. ಹೆಚ್ಚಿನ ಮಾಹಿತಿಗೆ ದೂ.ಸಂ.9480032712 ಅಥವಾ 08272–220986ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಮೊಳಹಳ್ಳಿ ಶಿವರಾವ್ ಸಹಕಾರಿ ರಂಗಕ್ಕೆ ಭದ್ರ ತಳಪಾಯ ಹಾಕಿ ಕೊಟ್ಟವರು: ಡಾ.ಎಂ.ಎನ್.ಆರ್



ಮಂಗಳೂರು : ಅವಿಭಜಿತ ದ.ಕ.ಜಿಲ್ಲೆಯಲ್ಲಿ ಸಹಕಾರಿ ರಂಗ ಬೆಳೆಯಲು ಮೊಳಹಳ್ಳಿ ಶಿವರಾವ್ ಅವರು ಹಾಕಿ ಕೊಟ್ಟ ಭದ್ರ ತಳಪಾಯ ಕಾರಣ ಎಂದು ದ.ಕ.ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ. ಅಧ್ಯಕ್ಷ ಡಾ.ಎಂ.ಎನ್.ರಾಜೇಂದ್ರ ಕುಮಾರ್ ಹೇಳಿದ್ದಾರೆ.ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ., ಮಂಗಳೂರು ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಯೂನಿಯನ್ ಲಿಮಿಟೆಡ್ ಮಂಗಳೂರು ಇದರ ಸಂಯುಕ್ತ ಆಶ್ರಯದಲ್ಲಿ ಎಸ್‌ಸಿಡಿಸಿಸಿ ಬ್ಯಾಂಕಿನ ಸಭಾಂಗಣದಲ್ಲಿ ನಡೆದ ಸಹಕಾರಿ ಪಿತಾಮಹ ದಿ. ಮೊಳಹಳ್ಳಿ ಶಿವರಾವ್ ಅವರ 145 ಜನ್ಮದಿನಾಚರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಹಕಾರಿ ಕ್ಷೇತ್ರ ಎಲ್ಲರನ್ನೂ ಬೆಳೆಸುತ್ತದೆ. ಮೊಳಹಳ್ಳಿ ಶಿವರಾಯರು ಸಮಾಜಕ್ಕೆ ದೊಡ್ಡ ಕೊಡುಗೆ ಸಹಕಾರಿ ಕ್ಷೇತ್ರ. ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ಸಾಲ ಪಡೆದ ರೈತರು ಶೇ.100 ಮರುಪಾವತಿ ಮಾಡುತ್ತಿರುವುದು ದೇಶದಲ್ಲೆ ಅಪರೂಪದ ಸಾಧನೆ. ಜಿಲ್ಲೆಯಲ್ಲಿ ರೈತರಿಗೆ ಸಾಲ ಸೌಲಭ್ಯ ದೊರೆತಿಲ್ಲ ಎನ್ನುವ ಕಾರಣದಿಂದ ಆತ್ಮಹತ್ಯೆ ಮಾಡಿಕೊಂಡ ಉದಾಹರಣೆ ಇಲ್ಲ ಎಂದು ಅವರು ಹೇಳಿದರು.

# ಬೈಂದೂರಿನಲ್ಲಿ ಎಂ.ಸಿ.ಸಿ. ಬ್ಯಾಂಕಿನ 20ನೇ ಶಾಖೆ ಉದ್ಘಾಟನೆ

ಬೈಂದೂರು: ತನ್ನ ಬೆಳವಣಿಗೆಯ ಪಯಣದಲ್ಲಿ ಮಹತ್ವದ ಮೈಲಿಗಲ್ಲನ್ನು ಗುರುತಿಸುವ ಮೂಲಕ, ಎಂ.ಸಿ.ಸಿ. ಬ್ಯಾಂಕ್ ತನ್ನ 20ನೇ ಶಾಖೆಯನ್ನು ಬೈಂದೂರಿನ ಪೆಟ್ರೋಲ್ ಬಂಕ್ ಬಳಿಯ ಮುಖ್ಯ ರಸ್ತೆಯ ದೀಪಾ ಕಾಂಪ್ಲೆಕ್ಸ್‌ನ ನೆಲ ಮಹಡಿಯಲ್ಲಿ ಉದ್ಘಾಟನೆಗೊಂಡಿತು.ಈ ಶಾಖೆಯನ್ನು ಎಂ.ಸಿ.ಸಿ. ಬ್ಯಾಂಕಿನ ಅಧ್ಯಕ್ಷ 'ಸಹಕಾರ ರತ್ನ' ಶ್ರೀ ಅನಿಲ್ ಲೋಬೊ ಅವರು ಗಣ್ಯ ಅತಿಥಿಗಳು, ಸಮುದಾಯದ ಸದಸ್ಯರು ಮತ್ತು ಬ್ಯಾಂಕ್ ಅಧಿಕಾರಿಗಳ ಸಮ್ಮುಖದಲ್ಲಿ ಉದ್ಘಾಟಿಸಿದರು. ಬೈಂದೂರಿನ ಹೋಲಿ ಕ್ರಾಸ್ ಚರ್ಚ್‌ನ ಧರ್ಮಗುರುಗಳಾದ ರೆವರೆಂಡ್ ಫಾದರ್ ವಿನ್ಸೆಂಟ್ ಕುವೆಲ್ಲೊ ಅವರು ಆಶೀರ್ವದಿಸಿ, ಹೊಸ ಶಾಖೆಯ ಯಶಸ್ಸಿಗೆ ಪ್ರಾರ್ಥನೆ ಸಲ್ಲಿಸಿದರು. ಕೊಲ್ಲೂರಿನ



ಶ್ರೀ ಮೂಕಾಂಬಿಕಾ ದೇವಸ್ಥಾನದ ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷರಾದ ಶ್ರೀ ಬಾಬು ಶೆಟ್ಟಿ ಸೇಫ್ ಡೆಪಾಸಿಟ್ ಲಾಕರ್ ಉದ್ಘಾಟಿಸಿದರು ಇ–ಸ್ಟಾಂಪಿಂಗ್ ಸೌಲಭ್ಯವನ್ನು ಬೈಂದೂರಿನ ಸೈಂಟ್ ಥಾಮಸ್ ವಸತಿ ಶಾಲೆಯ ಪ್ರಾಂಶುಪಾಲ ರೆವರೆಂಡ್ ಫಾದರ್ ಫಿಲಿಪ್ ನೆಲಿವಿಲ್ಲಾ ಉದ್ಘಾಟಿಸಿದರು.

# ಡಾ.ಎಂ.ಎನ್.ಆರ್‌ಗೆ 'ಬಸವ ಪುರಸ್ಕಾರ್–2025' ಪ್ರಶಸ್ತಿ



ಮಂಗಳೂರು : ಬಸವಣ್ಣನವರ ತತ್ವಗಳನ್ನು ಆಧರಿಸಿದ ಸಾಮಾಜಿಕ, ಧಾರ್ಮಿಕ ಮತ್ತು ಸಾಂಸ್ಕೃತಿಕ ನೆಲೆಗಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೆಂಗಳೂರಿನ ಪ್ರತಿಷ್ಠಿತ 'ಬಸವ ಪರಿಷತ್' ಬಸವ ಪುರಸ್ಕಾರದಂತಹ ಪ್ರಶಸ್ತಿಗಳನ್ನು ಪ್ರತಿ ವರ್ಷ ನೀಡುವುದರ ಮೂಲಕ ಸಾಧಕರನ್ನು ಗುರುತಿಸುತ್ತಿದ್ದು, ಈ ಬಾರಿಯ ಬಸವ ಪುರಸ್ಕಾರ್ –2025 ಪ್ರಶಸ್ತಿಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿ. ಬೆಂಗಳೂರು ಹಾಗೂ ದಕ್ಷಿಣ ಕನ್ನಡ ಜಿಲ್ಲೆ ಕೇಂದ್ರ ಸಹಕಾರಿ ಬ್ಯಾಂಕ್ ಇದರ ಅಧ್ಯಕ್ಷರಾದ ಸಹಕಾರ ರತ್ನ ಡಾ.ಎಂ.ಎನ್.ರಾಜೇಂದ್ರ ಕುಮಾರ್ ಅವರು ಆಯ್ಕೆಗೊಂಡಿದ್ದಾರೆ. ಡಾ.ಎಂ.ಎನ್.ರಾಜೇಂದ್ರ ಕುಮಾರ್ ಅವರು ಸಹಕಾರ ಹಾಗೂ ಮಹಿಳಾ ಸಬಲೀಕರಣದಲ್ಲಿ ಗೈದಿರುವ ಅತ್ಯದ್ಭುತ ಸಾಧನೆಯನ್ನು ಗುರುತಿಸಿ ಬಸವ ಪುರಸ್ಕಾರ್ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಪರಮ ಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ ಸುತ್ತೂರು ಕ್ಷೇತ್ರ ಮೈಸೂರು ಇವರ ದಿವ್ಯ ಸಾನಿಧ್ಯದಲ್ಲಿ ಆಗಸ್ಟ್ –9 ರಂದು ಬೆಂಗಳೂರಿನ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಆವರಣದ ಕೊಂಡಜ್ಜಿ ಬಸವ ಸಭಾಂಗಣದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

# ಧರ್ಮಸ್ಥಳದಲ್ಲಿ ಯೂಟ್ಯೂಬರ್‌ಗಳ ಮೇಲೆ ಹಲ್ಲೆ !

ಬೆಳ್ತಂಗಡಿ: ಧರ್ಮಸ್ಥಳದಲ್ಲಿ ನಾಲ್ಕು ಮಂದಿ ಯೂಟ್ಯೂಬರ್‌ಗಳ ಮೇಲೆ ಅಪರಿಚಿತರು ಹಲ್ಲೆ ನಡೆಸಿರುವ ಘಟನೆ ನಡೆದಿದೆ. ಅಜಯ್ ಅಂಚನ್, ಅಭಿಷೇಕ್, ವಿಜಯ್ ಮತ್ತು ಇನ್ನೋರ್ವ ಹಲ್ಲೆಗೆ ಒಳಗಾದ ಯುಟ್ಯೂಬರ್ ಎಂದು ತಿಳಿದು ಬಂದಿದೆ. ಹಲ್ಲೆ ನಡೆದ ಬಗ್ಗೆ ಮಾಹಿತಿ ಲಭ್ಯವಾಗುತ್ತಿದ್ದಂತೆಯೇ ಪೋಲೀಸರು ಸ್ಥಳಕ್ಕೆ ಧಾವಿಸಿದ್ದಾರೆ. ಈ ವೇಳೆ ಹಲ್ಲೆ ನಡೆಸಿದವರು ಪರಾರಿಯಾಗಿದ್ದಾರೆ ಎನ್ನಲಾಗಿದ್ದು, ಹಲ್ಲೆಗೊಳಗಾದ ಯೂಟ್ಯೂಬರ್‌ಗಳು ಮಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಇದೇ ಸಂದರ್ಭ ಸೌಜನ್ಯಾಳ ಚಿಕ್ಕಪ್ಪನಿಗೆ ಸೇರಿದ ವಾಹನದ ಮೇಲು ಹಲ್ಲೆಯಾಗಿದೆ



ಎಂದು ತಿಳಿದುಬಂದಿದೆ. ಪೋಲೀಸರು ಸ್ಥಳದಲ್ಲಿ ಬಂದೋಬಸ್ತ್ ಮಾಡಿದ್ದಾರೆ. ಇದರ ನಡುವೆ ಉಜಿರೆಯ ಖಾಸಗಿ ಆಸ್ಪತ್ರೆ ಆವರಣದಲ್ಲಿ ಖಾಸಗಿ ಚಾನಲ್ ವರದಿಗಾರನ ಮೇಲೆ ಮಹೇಶ್ ಶೆಟ್ಟಿ ತಿಮರೋಡಿ ಹಲ್ಲೆ ಮಾಡಿರುವ ಬಗ್ಗೆ ವರದಿಯಾಗಿದೆ.

# ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆದಲ್ಲಿ ಈರಪ್ಪ ನಾಯ್ಕರ್ ಚಿತ್ರ ಪ್ರಥಮ



ಮಂಗಳೂರು: ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸುವರ್ಣ ಸಂಭ್ರಮದ ಪ್ರಯುಕ್ತ ಪತ್ರಿಕಾ ಛಾಯಾಗ್ರಾಹಕರಿಗಾಗಿ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆಯ ಫಲಿತಾಂಶ ಪ್ರಕಟಗೊಂಡಿದ್ದು, ಹುಬ್ಬಳ್ಳಿಯ ಕನ್ನಡ ಪ್ರಭ ಪತ್ರಿಕೆಯ ಛಾಯಾಗ್ರಾಹಕ ಈರಪ್ಪ ನಾಯ್ಕರ್ ಅವರ ಚಿತ್ರ ಪ್ರಥಮ ಸ್ಥಾನ ಪಡೆದರೆ, ಮೈಸೂರಿನ ಕನ್ನಡಪ್ರಭ ಪತ್ರಿಕೆಯ ಛಾಯಾಗ್ರಾಹಕ ಎಂ.ಎಸ್. ಬಸವಣ್ಣ ದ್ವಿತೀಯ, ಮೈಸೂರಿನ ದಿ ಇಂಡಿಯನ್ ಎಕ್ಸ್‌ಪ್ರೆಸ್ ಪತ್ರಿಕೆಯ ಪ್ರಿನ್ಸಿಪಾಲ್ ಫೋಟೋಗ್ರಾಫರ್ ಉದಯಶಂಕರ್ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ. ಬೆಂಗಳೂರಿನ ಪ್ರಜಾವಾಣಿಯ ಹಿರಿಯ ಛಾಯಾಗ್ರಾಹಕ ಎಂ.ಎಸ್. ಮಂಜುನಾಥ್ ಮತ್ತು ಇಂದ್ರಕುಮಾರ್ ದಸ್ತೇನವರ ಚಿತ್ರ ತೀರ್ಪುಗಾರರ ಮೆಚ್ಚುಗೆಯ ಬಹುಮಾನಕ್ಕೆ ಪಾತ್ರವಾಗಿದೆ. ಖ್ಯಾತ ಛಾಯಾಗ್ರಾಹಕರಾದ ಯಜ್ಞ ಮಂಗಳೂರು ಹಾಗೂ ದಿನೇಶ್ ಕಾಸರಗೋಡು ಅವರು ತೀರ್ಪುಗಾರರಾಗಿ ಸಹಕರಿಸಿದ್ದರು.

# ಬಾಳೆಬರೆ ಘಾಟಿಯಲ್ಲಿ ಭಾರೀ ವಾಹನಗಳ ಸಂಚಾರಕ್ಕೆ ನಿಷೇಧ

ಉಡುಪಿ : ತೀರ್ಥಹಳ್ಳಿ–ಕುಂದಾಪುರ ರಾಜ್ಯ ಹೆದ್ದಾರಿ–52ರ ಬಾಳೆಬರೆ ಘಾಟ್ (ಹುಲಿಕಲ್ ಘಾಟ್) ರಸ್ತೆಯಲ್ಲಿ ಭೂ ಕುಸಿತ ಉಂಟಾಗಿರುವ ಹಿನ್ನೆಲೆಯಲ್ಲಿ ಈ ಮಾರ್ಗದಲ್ಲಿ ಭಾರೀ ವಾಹನಗಳ ಸಂಚಾರವನ್ನು ನಿಷೇಧಿಸಿ ಹಾಗೂ ಪರ್ಯಾಯ ಮಾರ್ಗದಲ್ಲಿ ಸಂಚಾರಕ್ಕೆ ಸೂಚಿಸಿ ತಾತ್ಕಾಲಿಕ ಆದೇಶವನ್ನು ಶಿವಮೊಗ್ಗದ ಜಿಲ್ಲಾಧಿಕಾರಿಯವರು ಹೊರಡಿಸಿದ್ದಾರೆ. ತೀರ್ಥಹಳ್ಳಿ–ಕುಂದಾಪುರ ರಾಜ್ಯ ಹೆದ್ದಾರಿ 52 ಬಾಳೆಬರೆ ಘಾಟ್‌ನ 42.10ರಿಂದ 42.20ರಲ್ಲಿನ ಹೇರ್‌ಪಿನ್ ತಿರುವಿನಲ್ಲಿ ಮೇ ಅಂತ್ಯದಲ್ಲಿ ಬಿದ್ದಂತಹ ಮಳೆಯಿಂದ ಕಾಂಕ್ರಿಟ್ ರಸ್ತೆಯ ಕೆಳಭಾಗದಲ್ಲಿ ಮಣ್ಣಿನ ಕುಸಿತ ಉಂಟಾಗಿದ್ದು, ಮತ್ತೆ ಮಳೆ ಚುರುಕುಗೊಂಡಿರುವುದರಿಂದ ಮಣ್ಣು ಮತ್ತೆ ಕುಸಿಯುವ ಸಂಭವವಿರು



ವುದರಿಂದ, ಸುರಕ್ಷತಾ ದೃಷ್ಟಿಯಿಂದ ತೀರ್ಥಹಳ್ಳಿ–ಕುಂದಾಪುರ ರಾಜ್ಯ ಹೆದ್ದಾರಿ–52ರ ಬಾಳೆಬರೆಘಾಟಿ ಮಾರ್ಗ ವ್ಯಾಪ್ತಿಯಲ್ಲಿ (ಮಾಸ್ತಿಕಟ್ಟೆಯಿಂದ ಹೊಸಂಗಡಿಯವರೆಗೆ) ತಾತ್ಕಾಲಿಕವಾಗಿ ಮಳೆಗಾಲದವರೆಗೆ ವಾಹನಗಳ ಸಂಚಾರವನ್ನು ನಿಷೇಧಿಸಿ ಹಾಗೂ ಪರ್ಯಾಯ ಮಾರ್ಗದಲ್ಲಿ ಸಂಚರಿಸಲು ತಾತ್ಕಾಲಿಕವಾಗಿ ಜಿಲ್ಲಾಧಿಕಾರಿ ಆದೇಶವನ್ನು ಹೊರಡಿಸಿದ್ದಾರೆ.

# ಎಂ.ಆರ್.ಎಫ್.ಘಟಕಕ್ಕೆ ಕಿಶೋರ್ ಕುಮಾರ್ ಪುತ್ತೂರು ಭೇಟಿ



ಮಂಗಳೂರು: ಪುತ್ತೂರು, ಸುಳ್ಯ ಹಾಗೂ ಕಡಬ ತಾಲೂಕುಗಳ ವ್ಯಾಪ್ತಿಯ 68 ಗ್ರಾಮ ಪಂಚಾಯತಿಗಳಿಂದ ಒಣ ಕಸವನ್ನು ಸಂಗ್ರಹಿಸುತ್ತಿರುವ ಸಮಗ್ರ ಘನತ್ಯಾಜ್ಯ ನಿರ್ವಹಣಾ ಕೇಂದ್ರ (MRF - Material Recovery Facility) ಪುತ್ತೂರು ತಾಲೂಕಿನ ಕೆದಂಬಾಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಗ್ರಾಮ ಪಂಚಾಯತಿಗಳಿಂದ ನಿರಂತರವಾಗಿ ಒಣ ಕಸ ಸಂಗ್ರಹಣೆ ಆಗದಿರುವುದರಿಂದ ಉಂಟಾಗುತ್ತಿರುವ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಶೀಲಿಸುವ ಹಾಗೊ ಘಟಕದ ಕಾರ್ಯವೈಖರಿಯನ್ನು ಅಧ್ಯಯನ ಮಾಡುವ ಉದ್ದೇಶದಿಂದ ವಿಧಾನ ಪರಿಷತ್ ಸದಸ್ಯ ಶ್ರೀ ಕಿಶೋರ್ ಕುಮಾರ್ ಪುತ್ತೂರು ಇಂದು MRF ಘಟಕಕ್ಕೆ ಭೇಟಿ ನೀಡಿದರು. ಘಟಕದ ಪ್ರಸ್ತುತ ಕಾರ್ಯಚರಣೆ, ತಾಂತ್ರಿಕ ಸವಾಲುಗಳು ಹಾಗೂ ನಿರ್ವಹಣಾ ತೊಂದರೆಗಳ ಕುರಿತು ವಿವರ ನೀಡಲಾಯಿತು. ಈ ಸಂದರ್ಭ ಮಾತನಾಡಿದ ಕಿಶೋರ್ ಕುಮಾರ್, ಘಟಕಕ್ಕೆ ಅಗತ್ಯವಿರುವ ತ್ಯಾಜ್ಯ ಸಂಗ್ರಹಣಾ ವಾಹನ ಹಾಗೂ ನಿರಂತರ ವಿದ್ಯುತ್ ಪೂರೈಕೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಶೀಘ್ರದಲ್ಲೇ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ "ಸ್ವಚ್ಛ ಭಾರತ್" ಅಭಿಯಾನದ ದೃಷ್ಟಿಕೋನ ಕೇವಲ ಶೌಚಾಲಯ ನಿರ್ಮಾಣಕ್ಕೆ ಮಾತ್ರ ಸೀಮಿತವಲ್ಲ ಎಂದು ಹೇಳಿದರು.

# ರೋಹನ್ ಕಾರ್ಪೋರೇಶನ್‌ನಿಂದ ಉಚಿತ ವೈದ್ಯಕೀಯ ಶಿಬಿರ

ಮಂಗಳೂರು: ಸಂಸ್ಥೆಯ ಸಿಬ್ಬಂದಿ ಹಾಗೂ ಕಾರ್ಮಿಕರ ಉತ್ತಮ ಆರೋಗ್ಯದ ಕಡೆಗೆ ಕಾಳಜಿ ತೋರುವ ಉದ್ದೇಶದಿಂದ ರೋಹನ್ ಕಾರ್ಪೋರೇಶನ್ ಸಂಸ್ಥೆ ಉಚಿತ ವೈದ್ಯಕೀಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಈ ಶಿಬಿರ ಮಂಗಳೂರು ಬಿಜೈ ಮುಖ್ಯ ರಸ್ತೆಯಲ್ಲಿರುವ ರೋಹನ್ ಸಿಟಿ ಆವರಣದಲ್ಲಿ ನಡೆಯಿತು. ಶಿಬಿರವನ್ನು ಹಿಂದ್ ಕುಷ್ಟ್ ನಿವಾರಣ್ ಸಂಘ (ರಿ) ಮತ್ತು ಲಯನ್ಸ್ ಕ್ಲಬ್ ಮಂಗಳಾದೇವಿ ಈ ಎರಡು ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿತ್ತು. ಬೆಳಿಗ್ಗೆಯಿಂದಲೇ ಶಿಬಿರದಲ್ಲಿ ನೂರಾರು ಉದ್ಯೋಗಿಗಳು ಮತ್ತು ಕಾರ್ಮಿಕರು ಭಾಗವಹಿಸಿದ್ದು, ತಜ್ಞ ವೈದ್ಯರ ತಂಡದಿಂದ ರಕ್ತದೊತ್ತಡ, ಡಯಾಬಿಟಿಸ್, ದಂತಚಿಕಿತ್ಸೆ, ಇ.ಸಿ.ಜಿ, ಸಾಮಾನ್ಯ



ತಪಾಸಣೆ ಸೇರಿದಂತೆ ವಿವಿಧ ಪರೀಕ್ಷೆಗಳು ನಡೆಯಿತು. ರೋಹನ್ ಕಾರ್ಪೋರೇಶನ್ ನ ಡೈರೆಕ್ಟರ್ ಡಿಯೋನ್ ಮೊಂತೇರೊರವರು "ನಮ್ಮ ಸಂಸ್ಥೆಯ ಬೆಳವಣಿಗೆಯಲ್ಲಿ ಕಾರ್ಮಿಕರ ಕೊಡುಗೆ ಅಮೂಲ್ಯವಾಗಿದೆ. ಅವರ ಆರೋಗ್ಯದ ಬಗ್ಗೆ ನಾವು ತೀವ್ರ ಕಾಳಜಿ ವಹಿಸುತ್ತಿದ್ದೇವೆ. ಈ ಶಿಬಿರವು ಕಾಳಜಿಯ ಪ್ರತಿಬಿಂಬವಾಗಿದೆ" ಎಂದು ಅಭಿಪ್ರಾಯಪಟ್ಟರು.

# ಮಂಗಳೂರು ಪ್ರೆಸ್ ಕ್ಲಬ್ ಸಮಾಚಾರ ಸಂಚಿಕೆ ಬಿಡುಗಡೆ



ಮಂಗಳೂರು : ದಾಖಲೀಕರಣ ಕಾರ್ಯಕ್ಕೆ ತನ್ನದೇ ಆದ ಮಹತ್ವವಿದೆ. ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿರುವ ಸಂಘ, ಸಂಸ್ಥೆಗಳ ಸಾಧನೆ ಶಾಶ್ವತ ದಾಖಲೆಯಾಗಿ ಮೂಡಿಬಂದರೆ ಮುಂದಿನ ಪೀಳಿಗೆಗೆ ಸ್ಫೂರ್ತಿಯ ಸೆಲೆಯಾಗಲು ಸಾಧ್ಯವಿದೆ ಎಂದು ಅನಿವಾಸಿ ಭಾರತೀಯ ಇಂಜಿನಿಯರ್ ಮಂಜೇಶ್ವರ ಮೋಹನ್‌ದಾಸ್ ಕಾಮತ್ ಹೇಳಿದರು. ನಗರದ ಪತ್ರಿಕಾ ಭವನದಲ್ಲಿ ನಡೆದ ಮಂಗಳೂರು ಪ್ರೆಸ್ ಕ್ಲಬ್‌ನ ಗೃಹ ಪತ್ರಿಕೆ 'ಮಂಗಳೂರು ಪ್ರೆಸ್ ಕ್ಲಬ್ ಸಮಾಚಾರ' ಇ–ಪೇಪರ್ ಇದರ ಆರನೇ ಸಂಚಿಕೆಯ ಬಿಡುಗಡೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ನೂತನ ಸಂಚಿಕೆ ಬಿಡುಗಡೆ ಮಾಡಿದ ಹಿರಿಯ ಪತ್ರಕರ್ತ ಬಿ. ರವೀಂದ್ರ ಶೆಟ್ಟಿ ಮಾತನಾಡಿ ಪತ್ರಕರ್ತರಿಗೆ ಕಾನೂನಿನ ಮಾಹಿತಿ ಅವಶ್ಯವಾಗಿದ್ದು, ಪತ್ರಿಕೋದ್ಯಮಕ್ಕೆ ಸಂಬಂಧಿಸಿದ ಕಾನೂನುಗಳ ಬಗ್ಗೆ ಬೆಳಕು ಚೆಲ್ಲುವ ಲೇಖನಗಳನ್ನು ಪ್ರಕಟಿಸಲು ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು. ಮಂಗಳೂರು ಪ್ರೆಸ್ ಕ್ಲಬ್ ಅಧ್ಯಕ್ಷ ಪಿ.ಬಿ.ಹರೀಶ್ ರೈ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ ನಾಯಕ್ ಇಂದಾಜೆ, ಪ್ರೆಸ್ ಕ್ಲಬ್‌ನ ನಿಕಟಪೂರ್ವ ಅಧ್ಯಕ್ಷ ಅನ್ನು ಮಂಗಳೂರು ಉಪಸ್ಥಿತರಿದ್ದರು.


# ಬೀದಿ ಬದಿ ವ್ಯಾಪಾರಸ್ಥರ ಹಕ್ಕು ಪ್ರಾಪ್ತಿಗೆ ಹೋರಾಟ ಅನಿವಾರ್ಯ–ಬಿ.ಎಂ.ಭಟ್

ಮಂಗಳೂರು : ಬೀದಿ ಬದಿ ವ್ಯಾಪಾರಿಗಳ ಸಮಗ್ರ ಅಭಿವೃದ್ಧಿ, ಪ್ರಭುತ್ವದ ಧಾಳಿ, ದಬ್ಬಾಳಿಕೆ ವಿರೋಧಿಸಿ, ವಿವಿಧ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ದಕ್ಷಿಣ ಕನ್ನಡ ಜಿಲ್ಲಾ ಬೀದಿ ಬದಿ ವ್ಯಾಪಾರಸ್ಥರ ಸಂಘ (ಸಿಐಟಿಯು) ನೇತೃತ್ವದಲ್ಲಿ ಬೀದಿ ಬದಿ ವ್ಯಾಪಾರಸ್ಥರ ಜಿಲ್ಲಾ ಸಮಾವೇಶವು ನಗರದ ನಾಸಿಕ್ ಬಂಗೇರ ಸಭಾಭವನದಲ್ಲಿ ಜರಗಿತು. ಸುಮಾರು 250ಕ್ಕೂ ಹೆಚ್ಚು ಬೀದಿ ಬದಿ ವ್ಯಾಪಾರಿಗಳು ಸಮಾವೇಶದಲ್ಲಿ ಭಾಗವಹಿಸಿದ್ದರು. ಸಿಐಟಿಯು ಜಿಲ್ಲಾ ಉಪಾಧ್ಯಕ್ಷರೂ, ವಕೀಲರೂ ಆದ ಬಿ.ಎಂ. ಭಟ್ ಸಮಾವೇಶ ಉದ್ಘಾಟಿಸಿ ಮಾತನಾಡುತ್ತಾ ದೇಶದಲ್ಲಿ ಐದು ಕೋಟಿಗೂ ಹೆಚ್ಚು ಬೀದಿ ಬದಿ ವ್ಯಾಪಾರಿಗಳಿದ್ದಾರೆ. ಬೀದಿ ವ್ಯಾಪಾರಿಗಳು ಅತ್ಯಂತ ಶ್ರಮ ಜೀವಿಗಳು ಅವರ



ಬೇಡಿಕೆಗಳು ನ್ಯಾಯತವಾಗಿದ್ದು ಹಕ್ಕುಪ್ರಾಪ್ತಿಗೆ ಹೋರಾಟಕ್ಕೆ ಇಳಿಯುವುದು ಅನಿವಾರ್ಯ ಎಂದು ಅವರು ತಿಳಿಸಿದರು. ಮುಂದುವರಿದು ಮಾತನಾಡುತ್ತಾ ಬೀದಿ ವ್ಯಾಪಾರಿಗಳ ಬದುಕುವ ಹಕ್ಕನ್ನು ಕಸಿಯಲು ಯಾರಿಗೂ ಸಾಧ್ಯವಿಲ್ಲ ಸಂಘಟನೆ ಮತ್ತು ಹೋರಾಟದಿಂದ ಬಲಿಷ್ಠ ಚಳುವಳಿ ಕಟ್ಟಬೇಕೆಂದು ಸಲಹೆ ನೀಡಿದರು.

# ಮಧ್ಯಸ್ಥಿಕೆ ಅಭಿಯಾನ–ಪ್ರಕರಣಗಳನ್ನು ಇತ್ಯರ್ಥಪಡಿಸಲು ಅವಕಾಶ




ಮಂಗಳೂರು: "ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ" ಎಂಬ 90 ದಿನಗಳ ವಿಶೇಷ ಮಧ್ಯಸ್ಥಿಕಾ ಅಭಿಯಾನ ಜುಲೈನಿಂದ ಪ್ರಾರಂಭವಾಗಿದ್ದು, ಅಕ್ಟೋಬರ್ 7ರವರೆಗೆ ನಡೆಯಲಿದೆ. ಈ ಪ್ರಯುಕ್ತ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಎಲ್ಲಾ ರೀತಿಯ ಸಿವಿಲ್ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಚೆಕ್ಕು ಅಮಾನ್ಯ ಪ್ರಕರಣಗಳು, ವಾಣಿಜ್ಯ ಮತ್ತು ಸೇವಾ ಪ್ರಕರಣಗಳು, ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಗ್ರಾಹಕರ ವ್ಯಾಜ್ಯ ಪ್ರಕರಣಗಳು, ಡಿ.ಆರ್.ಟಿ ಪ್ರಕರಣಗಳು, ಭೂ–ಸ್ವಾಧೀನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಸುವರ್ಣ ಅವಕಾಶವನ್ನು ಕಲ್ಪಿಸಲಾಗಿದೆ. ಸಾರ್ವಜನಿಕರು ತಮ್ಮ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಪಡಿಸಿಕೊಳ್ಳಲು ಇಚ್ಚಿಸಿ ಸೂಚಿಸಿದ್ದಲ್ಲಿ ನ್ಯಾಯಾಲಯದಿಂದ ಪ್ರಕರಣಗಳನ್ನು ಮಧ್ಯಸ್ಥಿಕಾ ಕೇಂದ್ರಕ್ಕೆ ಸೂಚಿಸಲಾಗುತ್ತದೆ.

# ಫುಟ್ಬಾಲ್ ಕ್ರೀಡಾಂಗಣ ಪೂರಕ ಸೌಲಭ್ಯಕ್ಕೆ 75ಲಕ್ಷ ರೂ.–ಶಾಸಕ ಕಾಮತ್

ಮಂಗಳೂರು: ನಗರದ ನೆಹರು ಮೈದಾನದ ಫುಟ್ಬಾಲ್ ಕ್ರೀಡಾಂಗಣಕ್ಕೆ ಪೂರಕ ಸೌಲಭ್ಯಗಳನ್ನು ಒದಗಿಸಲು 75ಲಕ್ಷ ರೂ. ವೆಚ್ಚದಲ್ಲಿ ಯೋಜನೆ ರೂಪಿಸಲಾಗಿದೆ ಎಂದು ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಡಿ. ವೇದವ್ಯಾಸ್ ಕಾಮತ್ ಹೇಳಿದ್ದಾರೆ. ಅವರು ಸ್ವಾತಂತ್ರ್ಯೋತ್ಸವದ ಅಂಗವಾಗಿ ನಡೆಯುತ್ತಿರುವ ಶಾಲಾ–ಕಾಲೇಜು ಮಟ್ಟದ 27ನೇ



'ಇಂಡಿಪೆಂಡೆನ್ಸ್ ಕಪ್ ಫುಟ್ಬಾಲ್ ಪಂದ್ಯಾಟ' ವನ್ನು ನಗರದ ಕರಾವಳಿ ಉತ್ಸವ ಮೈದಾನದಲ್ಲಿ ಉದ್ಘಾಟಿಸಿ ಮಾತನಾಡಿದರು.

# ಸುದ್ದಿ ತುಣುಕು

ಉಪರಾಷ್ಟ್ರಪತಿ ಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ಅಧಿಸೂಚನೆ ಹೊರಡಿಸಿದೆ.

ಆಪರೇಷನ್ ಸಿಂಧೂರ್ ಮುಸ್ಲಿಂ ಭೂಮಿಯನ್ನು ಏಕೀಕರಿಸಲು ಸಿಕ್ಕಿರುವ ಸುವರ್ಣಾವಕಾಶ ಎಂದು ಪಾಕ್ ಸೇನಾ ಮುಖ್ಯಸ್ಥರಿಗೆ ಬಂಧಿತ ಮಹಿಳೆ ಸಂದೇಶ ರವಾನಿಸಿರುವ ಕುರಿತು ಎಟಿಎಸ್ ಮಾಹಿತಿ ನೀಡಿದೆ.

ಭಾರತದ ಕೃಷಿಕರ ಹಿತಾಸಕ್ತಿ ಕಾಪಾಡಲು ನಾವು ದುಬಾರಿ ಸುಂಕ ಪಾವತಿಗೆ ಸಿದ್ಧವಾಗಿದ್ದೇವೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಟ್ರಂಪ್ ಹೆಸರಿನಲ್ಲಿ ನಕಲಿ ವಾಸ ಪ್ರಮಾಣ ಪತ್ರವೊಂದು ಬಿಹಾರದ ಸಮಸ್ತಿಪುರದಲ್ಲಿ ಕಂಡುಬಂದಿದ್ದು, ಪೊಲೀಸರು ಎಫ್ಐ ಆರ್ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ತಮಿಳುನಾಡಿನ ಮಹಿಳೆಯೊಬ್ಬರು ಕಳೆದ 22 ತಿಂಗಳಲ್ಲಿ ಒಟ್ಟು 300.17 ಲೀಟರ್ ಎದೆಹಾಲು ದಾನ ಮಾಡಿ, ಅವಧಿಪೂರ್ವ ಜನಿಸಿದ ಮಕ್ಕಳು ಹಾಗು ಗಂಭೀರ ಖಾಯಿಲೆಗಳಿಂದ ಬಳಲುತ್ತಿರುವ ಮಕ್ಕಳ ಜೀವ ಉಳಿಸುವಲ್ಲಿ ಅಮೂಲ್ಯ ಕೊಡುಗೆ ನೀಡಿದ್ದಾರೆ.

ಉತ್ತರಾಖಂಡಕ್ಕೆ ಪ್ರವಾಸ ತೆರಳಿದ್ದ 28 ಕೇರಳಿಗರು ನಾಪತ್ತೆಯಾಗಿದ್ದಾರೆ. ಗಂಗೋತ್ರಿಗೆ ಹೊರಟ ಬಳಿಕ ಸಂಪರ್ಕ ಕಡಿತಗೊಂಡಿದೆ ಎಂದು ಅವರ ಸಂಬಂಧಿಕರು ತಿಳಿಸಿದ್ದಾರೆ.

ತಮಿಳುನಾಡಿನಲ್ಲಿ "ಉಂಗಲುದನ್ ಸ್ಟಾಲಿನ್" (ನಿಮ್ಮ ಜೊತೆ ಸ್ಟಾಲಿನ್) ಯೋಜನೆಗೆ ಸುಪ್ರೀಂ ಕೋರ್ಟ್ ಹಸಿರು ನಿಶಾನೆ ತೋರಿಸಿದೆ.

ಡೀಸೆಲ್, ಪೆಟ್ರೋಲ್ ಮೇಲೆ 50 ಪೈಸೆ ಸೆಸ್ ಹೆಚ್ಚಿಸಿ, ಕಾರ್ಮಿಕರ ಕಲ್ಯಾಣಕ್ಕೆ ನೀಡಲಾಗುವುದು ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ.

ರಾಜ್ಯದಲ್ಲಿ 1417ಕ್ಕೂ ಹೆಚ್ಚು ಜನೌಷಧಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಕರ್ನಾಟಕ ದೇಶದಲ್ಲಿಯೇ ಅಗ್ರಸ್ಥಾನದಲ್ಲಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

25 ಪೈಸೆ ಕ್ರೋಢೀಕರಣ ಹಾಗೂ ನಾಲ್ಕಾಣೆಯ ಸದಸ್ಯತ್ವದಿಂದ ಆರಂಭವಾದ ಕೆ.ಆರ್.ಬ್ಯಾಂಕ್ (ಕೃಷ್ಣ ರಾಜೇಂದ್ರ ಸಹಕಾರ ಬ್ಯಾಂಕ್) ಇಂದು, ಕೋಟಿಗಟ್ಟಲೆ ರೂಪಾಯಿಯ ವ್ಯವಹಾರ ಮಾಡುತ್ತಿದೆ.

ಕೃಷಿ ಸಚಿವ ಚಲುವರಾಯಸ್ವಾಮಿ ಅವರು ರಸಗೊಬ್ಬರ ಕೊರತೆ ಕುರಿತು ಮಾತನಾಡಿದ್ದಾರೆ. ಈ ವಿಚಾರವಾಗಿ ಏನು ಮಾಡಬೇಕು ಅಂತ ನನಗೂ ಗೊಂದಲ ಆಗಿದೆ ಎಂದು ಹೇಳಿದ್ದಾರೆ.

ಯೂಟ್ಯೂಬರ್ಸ್ ಮೇಲೆ ಸ್ಥಳೀಯರು ಹಲ್ಲೆ ನಡೆಸಿರುವ ಆರೋಪ ದಕ್ಷಿಣ ಕನ್ನಡದಲ್ಲಿ ಕೇಳಿಬಂದಿದೆ.

ಇಂಡಿಯಾ ಒಕ್ಕೂಟದ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿಗಳಿಗೆ ಆಹ್ವಾನ ಬಂದಿದೆ. ನಾನು ಇಲ್ಲಿ ಪ್ರತಿಭಟನೆ ಸಭೆ ಸಿದ್ಧತೆಯ ಉಸ್ತುವಾರಿ ನೋಡಬೇಕು. ಅದಕ್ಕಾಗಿ ಇಲ್ಲೇ ಇರುತ್ತೇನೆ ಎಂದು ಡಿಸಿಎಂ ಹೇಳಿದರು.


ಮಂಗಳೂರು ಕುಕ್ಕರ್ ಬಾಂಬ್ ಸ್ಫೋಟ ಪ್ರಕರಣದ ಪ್ರಮುಖ ಆರೋಪಿ ಸೈಯದ್ ಯಾಸಿನ್‌ನ ಬ್ಯಾಂಕ್ ಖಾತೆಯಲ್ಲಿದ್ದ 29ಸಾವಿರ ರೂಪಾಯಿ ಹಣವನ್ನು ಜಾರಿ ನಿರ್ದೇಶನಾಲಯವು (ಇ.ಡಿ.) ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ (ಪಿಎಂಎಲ್ಎ) ಮುಟ್ಟುಗೋಲು ಹಾಕಿಕೊಂಡಿದೆ.

ಡಿಬಿಟಿ ಬದಲಿಗೆ ಸ್ವಯಂ ದೃಢೀಕರಣ ಆಧಾರಿತ ತಸ್ತಿಕ್ ಹಣ ಪಾವತಿ ಪದ್ಧತಿ ಮುಂದುವರಿಸಲು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾ ಮಾಡಿದೆ.

ಮೈಸೂರಿಗೆ ಹೊರಟಿದ್ದ ರೈಲಿನ ಬೋಗಿಗಳ ಲಿಂಕ್ ಕಳಚಿ ತುಂಗಾ ನದಿ ಸೇತುವೆ ಮೇಲೆಯೇ ನಿಂತ ಘಟನೆ ಶಿವಮೊಗ್ಗದಲ್ಲಿ ನಡೆದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದು ದಿಢೀರನೇ ವಿಕ್ಟೋರಿಯಾ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ರಾಗಿ ಮಣ್ಣಿ



**ಬೇಕಾಗುವ ಸಾಮಾಗ್ರಿ :**

ರಾಗಿ– 4 ಕಪ್
ಹಾಲು –2 ಕಪ್
ಬೆಲ್ಲ –2 ಕಪ್
ತುಪ್ಪ –4 ಚಮಚ
ನೀರು– 4 ಕಪ್
ಏಲಕ್ಕಿ– 2
ಡ್ರೈ ಫ್ರೂಟ್ಸ್–ಸ್ವಲ್ಪ

**ಮಾಡುವ ವಿಧಾನ :**


ರಾಗಿಯನ್ನು 5ರಿಂದ 6ಗಂಟೆ ನೆನೆಹಾಕಿ ನಂತರ ಚೆನ್ನಾಗಿ ರುಬ್ಬಿ ಅದರ ರಸವನ್ನು ಸೋಸಿ ಪಾತ್ರೆಗೆ ಹಾಕಿಕೊಂಡು, ಅದಕ್ಕೆ ಪುಡಿಮಾಡಿಕೊಂಡ ಬೆಲ್ಲ, ಏಲಕ್ಕಿ, ಹಾಲು ಸೇರಿಸಿ ಚೆನ್ನಾಗಿ ಕಲಸಬೇಕು. ಇದನ್ನು ಸ್ಟವ್‌ನಲ್ಲಿ ಇಟ್ಟು, ಕಡಿಮೆ ಉರಿಯಲ್ಲಿ ಕೈಯಾಡಿಸುತ್ತಾ ಬೇಯಿಸಬೇಕು. ನಂತರ ತುಪ್ಪ ಸೇರಿಸಿ ತಿರುಗಿಸಿ. 20–25 ನಿಮಿಷ ತಿರುಗಿಸುತ್ತಲೇ ಬೇಯಿಸುತ್ತಿದ್ದರೆ ಗಟ್ಟಿಯಾಗುವುದು. ಹಿಟ್ಟು ಗಟ್ಟಿಯಾದ ಬಳಿಕ ತಟ್ಟೆಗೆ ತುಪ್ಪ ಸವರಿ ಅದರಲ್ಲಿ ಸುರಿಯಬೇಕು. ನಂತರ ಒಂದು ಸ್ಪೂನ್‌ನಿಂದ ಅದರ ಮೇಲೆ ತಟ್ಟಿ, ನಂತರ ಡ್ರೈಫ್ರೂಟ್ಸ್‌ನಿಂದ ಅಲಂಕರಿಸಿ, ತಣ್ಣಗಾದ ನಂತರ ಬೇಕಾದ ಶೇಪ್‌ಗೆ ಕತ್ತರಿಸಿದರೆ ಆರೋಗ್ಯಕರವಾದ ಮತ್ತು ರುಚಿಯಾದ ರಾಗಿ ಮಣ್ಣಿ ಸವಿಯಲು ಸಿದ್ಧ.

# ಉಗ್ರನ ಅಂತ್ಯಕ್ರಿಯೆಯಲ್ಲಿ ಪಾಕ್ ಅಧಿಕಾರಿಗಳು ಬಾಗಿ !



ನವದೆಹಲಿ: ಪಹಲ್ಗಾಮ್ ಹತ್ಯಾಕಾಂಡದ ಹಿಂದೆ ಪಾಕಿಸ್ತಾನದ ಕೈವಾಡ ಇರುವುದು ಮತ್ತೊಮ್ಮೆ ಬಯಲಾಗಿದೆ. ಪಹಲ್ಗಾಮ್ ದಾಳಿಕೋರರ ಪೈಕಿ ಒಬ್ಬನಾದ ತಹೀರ್ ಹಬೀಬ್ ಅಲಿಯಾಸ್ ಅಫ್ಘಾನಿಯ ಅಂತ್ಯಕ್ರಿಯೆ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ (ಪಿಒಕೆ) ನಡೆದಿದ್ದು, ಅದರಲ್ಲಿ ಪಾಕ್‌ನ ಸೇನಾಧಿಕಾರಿಗಳು ಮತ್ತು ಲಷ್ಕರ್ ಎ ತೊಯ್ಬಾದ ಉಗ್ರರು ಭಾಗಿಯಾಗಿದ್ದರು. ಭಾರತೀಯ ಸೇನೆ ಇತ್ತೀಚೆಗೆ ನಡೆಸಿದ 'ಆಪರೇಷನ್ ಮಹಾದೇವ್' ಕಾರ್ಯಾಚರಣೆಯಲ್ಲಿ ಪಹಲ್ಗಾಮ್ ದಾಳಿಕೋರರಲ್ಲಿ ಒಬ್ಬನಾದ ಉಗ್ರ ತಹೀರ್ ಹಬೀಬ್ ಅಲಿಯಾಸ್ ಅಫ್ಘಾನಿ ಹತ್ಯೆಗೀಡಾಗಿದ್ದ.

# ಇಂಧನ ಖರೀದಿ ಯುದ್ಧ ಮುಂದುವರೆಸಲು ಸಹಾಯ ಮಾಡುತ್ತಿದೆ – ರೂಬಿಯೋ



ಅಮೆರಿಕ : "ಉಕ್ರೇನ್ ಮೇಲೆ ರಷ್ಯಾ ಯುದ್ಧ ಮುಂದುವರೆಸುತ್ತಿರುವುದಕ್ಕೆ ಭಾರತದ ತೈಲ ಖರೀದಿ ಸಹಾಯ ಮಾಡುತ್ತಿದೆ. ವಾಷಿಂಗ್ಟನ್ ನೊಂದಿಗಿನ ನವದೆಹಲಿಯ ಸಂಬಂಧಕ್ಕೆ ಖಂಡಿತವಾಗಿಯೂ ಇದು ಕಿರಿಕಿರಿ ಉಂಟು ಮಾಡುವ ಅಂಶ" ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಹೇಳಿದರು. ಭಾರತ ರಷ್ಯಾದಿಂದ ಹೆಚ್ಚು ಇಂಧನ ಖರೀದಿಸುತ್ತಿದೆ, ಏಕೆಂದರೆ ರಷ್ಯಾದ ತೈಲ ಅಗ್ಗವಾಗಿದೆ. ರಷ್ಯಾ ಅನೇಕ ಸಂದರ್ಭಗಳಲ್ಲಿ ನಿರ್ಬಂಧಗಳ ಕಾರಣದಿಂದಾಗಿ ಜಾಗತಿಕ ಇಂಧನ ಬೆಲೆಗಿಂತ ಕಡಿಮೆ ಬೆಲೆಗೆ ಇಂಧನ ಮಾರಾಟ ಮಾಡುತ್ತಿದೆ" ಎಂದರು.

# ಟ್ರಂಪ್ ನೊಬೆಲ್ ಶಾಂತಿ ಪ್ರಶಸ್ತಿಗೆ ಅರ್ಹ : ಶ್ವೇತಭವನ



ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಆರು ತಿಂಗಳ ಅಧಿಕಾರಾವಧಿಯಲ್ಲಿ ತಿಂಗಳಿಗೆ ಸರಾಸರಿ ಒಂದು ಶಾಂತಿ ಒಪ್ಪಂದ ಅಥವಾ ಕದನ ವಿರಾಮ ಘೋಷಣೆಯಲ್ಲಿ ಮಧ್ಯಸ್ಥಿಕೆ ವಹಿಸಿದ್ದಾರೆ. ಹೀಗಾಗಿ, ಅವರಿಗೆ ನೊಬೆಲ್ ಶಾಂತಿ ಪ್ರಶಸ್ತಿ ನೀಡಬೇಕೆಂದು ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಪುನರುಚ್ಚರಿಸಿದ್ದಾರೆ. ಟ್ರಂಪ್ ತಮ್ಮ ಆರು ತಿಂಗಳ ಅಧಿಕಾರಾವಧಿಯಲ್ಲಿ ಸರಾಸರಿ ತಿಂಗಳಿಗೆ ಒಂದು ಶಾಂತಿ ಒಪ್ಪಂದ ಅಥವಾ ಕದನ ವಿರಾಮದಲ್ಲಿ ತಮ್ಮ ಮಧ್ಯಸ್ಥಿಕೆ ವಹಿಸಿದ್ದಾರೆ. ಹೀಗಾಗಿ, ಅವರಿಗೆ ನೊಬೆಲ್ ಶಾಂತಿ ಪ್ರಶಸ್ತಿ ನೀಡುವ ಸಮಯವಿದು" ಎಂದು ಕ್ಯಾರೋಲಿನ್ ಲೀವಿಟ್ ಆಗ್ರಹಿಸಿದರು.

# ರಷ್ಯಾದಿಂದ ಅಮೆರಿಕ ರಸಗೊಬ್ಬರ, ರಾಸಾಯನಿಕ ಆಮದು !



ಯುಎಸ್ಎ : ನಾವು ರಷ್ಯಾದಿಂದ ಯುರೇನಿಯಂ, ರಸಗೊಬ್ಬರ ಮತ್ತು ರಾಸಾಯನಿಕ ವಸ್ತುಗಳನ್ನು ಆಮದು ಮಾಡಿಕೊಳ್ಳುತ್ತಿರುವ ಬಗ್ಗೆ ನನಗೇನೂ ಗೊತ್ತಿಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ರಷ್ಯಾ ಜೊತೆಗೆ ನಾವು ವ್ಯಾಪಾರ ಮಾಡಬಾರದು ಎಂದು ತಾಕೀತು ಮಾಡುತ್ತಿರುವ ಅಮೆರಿಕ, ಅದೇ ರಷ್ಯಾದಿಂದ ಈ ಎಲ್ಲಾ ಸರಕುಗಳ ಆಮದು ಮಾಡಿಕೊಳ್ಳುತ್ತಿದೆ ಎಂಬ ಭಾರತದ ತೀಕ್ಷ್ಣ ಪ್ರತಿಕ್ರಿಯೆಯ ಬೆನ್ನಲ್ಲೇ ಟ್ರಂಪ್ ಹೇಳಿಕೆ ಗಮನ ಸೆಳೆದಿದೆ. ಈ ಕುರಿತು ನನಗೆ ತಿಳಿದಿಲ್ಲ, ಪರಿಶೀಲಿಸಲಾಗುವುದು. ರಷ್ಯಾದಿಂದ ಇಂಧನ ಕೊಳ್ಳುತ್ತಿರುವ ದೇಶಗಳ ಮೇಲೆ ಎಷ್ಟು ಪ್ರಮಾಣದಲ್ಲಿ ಸುಂಕ ಜಾರಿ ಮಾಡಬೇಕು ಎಂಬುದನ್ನು ನಿರ್ಧರಿಸುತ್ತೇವೆ ಎಂದು ಹೇಳಿದ್ದಾರೆ.

# ಮಾಸ್ಕೋಗೆ ಭೇಟಿ ನೀಡಿದ ಅಜಿತ್ ದೋವಲ್



ಮಾಸ್ಕೋ : ರಷ್ಯಾದೊಂದಿಗಿನ ವ್ಯಾಪಾರದ ಕುರಿತಂತೆ ಭಾರತ ಮತ್ತು ಅಮೆರಿಕ ನಡುವೆ ಉದ್ವಿಗ್ನ ಪರಿಸ್ಥಿತಿ ತಲೆದೋರಿದೆ. ರಷ್ಯಾದೊಂದಿಗಿನ ಭಾರತದ ಕಾರ್ಯತಂತ್ರದ ಪಾಲುದಾರಿಕೆ ಮತ್ತು ರಕ್ಷಣಾ ಸಂಬಂಧಗಳ ಕುರಿತು ಚರ್ಚಿಸಲು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮಾಸ್ಕೋಗೆ ಆಗಮಿಸಿದ್ದಾರೆ. ರಷ್ಯಾದ ಸರ್ಕಾರಿ ಸ್ವಾಮ್ಯದ ಸುದ್ದಿ ಸಂಸ್ಥೆ ಈ ಬಗ್ಗೆ ವರದಿ ಮಾಡಿದೆ. ಮಾಸ್ಕೋದಲ್ಲಿನ ಭಾರತೀಯ ರಾಯಭಾರಿ ವಿನಯ್ ಕುಮಾರ್ ಮತ್ತು ರಷ್ಯಾದ ಉಪರಕ್ಷಣಾ ಸಚಿವ ಕರ್ನಲ್–ಜನರಲ್ ಅಲೆಕ್ಸಾಂಡರ್ ಫೋಮಿನ್ ನಡುವಣ ಸಭೆಯಲ್ಲಿ ಭಾರತ ಮತ್ತು ರಷ್ಯಾ ದ್ವಿಪಕ್ಷೀಯ ರಕ್ಷಣಾ ಸಹಕಾರವ ನ್ನು ಹೆಚ್ಚಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಲಾಗಿದೆ.

# ಪಾಕ್‌ನಲ್ಲಿ ಚಿನ್ನ–ತಾಮ್ರದ ಗಣಿಗಾರಿಕೆಗೆ ನೆರವು



ಇಸ್ಲಾಮಾಬಾದ್: ಪಾಕಿಸ್ತಾನದ ಬಲೂಚಿಸ್ತಾನ್ ಪ್ರದೇಶದಲ್ಲಿ ರೆಕೊ ದಿಕ್ ಪ್ರದೇಶದಲ್ಲಿ ತಾಮ್ರ ಮತ್ತು ಚಿನ್ನದ ಗಣಿಗಾರಿಕೆ ಯೋಜನೆ ನಡೆಸಲು ಬಹುರಾಷ್ಟ್ರೀಯ ದಾನಿಗಳು ಮತ್ತು ಏಜೆನ್ಸಿಗಳಿಂದ 5 ಬಿಲಿಯನ್ ಅಮೆರಿಕನ್ ಡಾಲರ್ ನೆರವು ಹರಿದು ಬಂದಿದೆ ಎಂದು ಮಾಧ್ಯಮವೊಂದು ವರದಿ ಮಾಡಿದೆ. ರೆಕೊ ದಿಕ್ ಯೋಜನೆಗೆ ಸುಮಾರು 3 ಬಿಲಿಯನ್ ಅಮೆರಿಕನ್ ಡಾಲರ್ ನೆರವು ಅಂದಾಜಿಸಲಾಗಿತ್ತು. ಆದರೆ ಇದೀಗ ವಿದೇಶಿ ದಾನಿಗಳಿಂದ ಅಗತ್ಯಕ್ಕೆ ಮೀರಿದ ಹಣಕಾಸಿನ ನೆರವು ಲಭ್ಯವಾಗಿದೆ ಎಂದು ಮೂಲಗಳು ದಿ ಎಕ್ಸ್‌ಪ್ರೆಸ್ ಟ್ರಿಬ್ಯೂನ್ ಪತ್ರಿಕೆಗೆ ತಿಳಿಸಿವೆ.

# ಟೆಸ್ಟ್ ಸರಣಿಯಲ್ಲಿ ಸಮ ಬಲಗಳಿಸಿದ ಭಾರತ



ಲಂಡನ್: ಆತಿಥೇಯ ಇಂಗ್ಲೆಂಡ್ ವಿರುದ್ಧದ 'ಆಂಡರ್ಸನ್–ತೆಂಡೂಲ್ಕರ್ ಟ್ರೋಫಿ' ಟೆಸ್ಟ್ ಕ್ರಿಕೆಟ್ ಸರಣಿಯ ಅಂತಿಮ ಪಂದ್ಯದಲ್ಲಿ ಅಮೋಘ ಪ್ರದರ್ಶನ ತೋರಿದ ಭಾರತ, ಕೈಜಾರಿದ್ದ ಗೆಲುವನ್ನು ಕೊನೇ ಕ್ಷಣದಲ್ಲಿ ಬಾಚಿಕೊಂಡಿತು. ಇದರೊಂದಿಗೆ ಐದು ಪಂದ್ಯಗಳ ಸರಣಿಯಲ್ಲಿ 2–2 ಅಂತರದ ಸಮಬಲ ಸಾಧಿಸಿತು.ಕೆನ್ನಿಂಗ್ಟನ್ ಓವಲ್ ಕ್ರೀಡಾಂಗಣದಲ್ಲಿ ಟೀಂ ಇಂಡಿಯಾ ನೀಡಿದ್ದ 374 ರನ್‌ಗಳ ಕಠಿಣ ಗುರಿ ಬೆನ್ನತ್ತಿದ ಆಂಗ್ಲರ ಪಡೆ, 367 ರನ್ ಗಳಿಸುವಷ್ಟರಲ್ಲಿ ಸರ್ವಪತನ ಕಂಡಿತು.

# ಆಸ್ಟ್ರೇಲಿಯಾ ಪ್ರವಾಸ ಕೈಗೊಳ್ಳಲಿರುವ ಭಾರತ ಹಾಕಿ ತಂಡ



ನವದೆಹಲಿ: ಮುಂಬರುವ ಏಷ್ಯಾ ಕಪ್ ಗೆ ಸಿದ್ಧತೆಯ ಭಾಗವಾಗಿ ಭಾರತ ಪುರುಷರ ಹಾಕಿ ತಂಡ ಆಗಸ್ಟ್ 15 ರಿಂದ 21 ರವರೆಗೆ ಪರ್ತ್‌ನಲ್ಲಿ ನಾಲ್ಕು ಪಂದ್ಯಗಳ ಸ್ನೇಹಪರ ನಾಲ್ಕು ಪಂದ್ಯಗಳ ಸರಣಿಗಾಗಿ ಆಸ್ಟ್ರೇಲಿಯಾ ಪ್ರವಾಸ ಕೈಗೊಳ್ಳಲಿದೆ. ಎಂಟನೇ ಶ್ರೇಯಾಂಕದ ಭಾರತ ತಂಡವು ಆಗಸ್ಟ್ 15, 16, 19 ಮತ್ತು 21 ರಂದು ಇದೇ ಸ್ಥಳದಲ್ಲಿ ಆರನೇ ಶ್ರೇಯಾಂಕದ ಆತಿಥೇಯರನ್ನು ಎದುರಿಸಲಿದೆ. ಏಷ್ಯಾಕಪ್ ಆಗಸ್ಟ್ 29 ರಿಂದ ಸೆಪ್ಟೆಂಬರ್ 7 ರವರೆಗೆ ಬಿಹಾರದ ರಾಜ್‌ಗಿರ್‌ನಲ್ಲಿ ನಡೆಯಲಿದೆ.

# ಸಚಿವ ಕೆ.ಜೆ.ಜಾರ್ಜ್ ವಿರುದ್ಧ ದೂರಿಗೆ ಹೈಕೋರ್ಟ್ ತಡೆ



ಬೆಂಗಳೂರು: ಸ್ಮಾರ್ಟ್ ಮೀಟರ್ ಗುತ್ತಿಗೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಕ್ಕೆ ಸಂಬಂಧಿಸಿದಂತೆ ಇಂಧನ ಸಚಿವ ಕೆ.ಜೆ.ಜಾರ್ಜ್ ವಿರುದ್ಧದ ಖಾಸಗಿ ದೂರಿನ ವಿಚಾರಣೆಗೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, "ನಮ್ಮ ಕಕ್ಷಿದಾರರು ಜನಪ್ರತಿನಿಧಿಯಾಗಿದ್ದಾರೆ. ಅವರ ವಿರುದ್ಧದ ವಿಚಾರಣೆಗೆ ಭ್ರಷ್ಟಾಚಾರ ತಡೆ ಕಾಯಿದೆ ಸೆಕ್ಷನ್ 17ಎ ಅಡಿಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆಯಬೇಕಾಗುತ್ತದೆ. ಪ್ರಾಧಿಕಾರದಿಂದ ಅನುಮತಿ ಪಡೆಯದೆ ವಿಚಾರಣೆಗೆ ಪರಿಗಣಿಸಲಾಗಿದೆ. ಇದು ಕಾನೂನುಬಾಹಿರ" ಎಂದರು. ಇದನ್ನು ಪರಿಗಣಿಸಿದ ಪೀಠ, ವಿಚಾರಣೆಗೆ ತಡೆ ನೀಡಿದೆ.

# ಅಧಿವೇಶನದಲ್ಲಿ ಚಾಟಿ ಬೀಸಲು ಬಿಜೆಪಿ ಪೂರ್ವಭಾವಿ ಸಭೆ



ಬೆಂಗಳೂರು: ಆಗಸ್ಟ್ 11ರಿಂದ ರಾಜ್ಯ ವಿಧಾನ ಸಭಾ ಅಧಿವೇಶನ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ಚಾಟಿ ಬೀಸುವ ಸಂಬಂಧ ಬಿಜೆಪಿ ಪೂರ್ವಭಾವಿ ಸಭೆ ನಡೆಸಿತು. ಖಾಸಗಿ ಹೋಟೆಲ್‌ನಲ್ಲಿ ನಡೆದ ಶಾಸಕರ ಸಭೆಯಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ, ಶಾಸಕರಾದ ಡಾ.ಸಿ.ಎನ್. ಅಶ್ವತ್ಥನಾರಾಯಣ, ವಿ. ಸುನಿಲ್ ಕುಮಾರ್, ಸುರೇಶ್ ಕುಮಾರ್, ಅರಗ ಜ್ಞಾನೇಂದ್ರ, ಗೋಪಾಲಯ್ಯ, ಸಿ.ಸಿ.ಪಾಟೀಲ್ ಸೇರಿದಂತೆ ಹಲವು ಪ್ರಮುಖರು ಭಾಗವಹಿಸಿದ್ದರು. ಆಡಳಿತ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಲು ಬಿಜೆಪಿ ತಯಾರಿ ಮಾಡಿಕೊಂಡಿದೆ.

# ಪ್ರಹ್ಲಾದ್ ಜೋಶಿ ಪ್ರಾಮಿಸ್ : ಮಹದಾಯಿ ಪ್ರತಿಭಟನೆ ವಾಪಸ್!



ಹುಬ್ಬಳ್ಳಿ: ಮಹದಾಯಿ ಯೋಜನೆಗೆ ಪರಿಸರ ಇಲಾಖೆಯಿಂದ ಅನುಮತಿ ದೊರಕಿಸಿ ಕೊಡುವಂತೆ ಆಗ್ರಹಿಸಿ ನಗರದ ಚಿಟಗುಪ್ಪಿ ಆಸ್ಪತ್ರೆಯ ಸಮೀಪದಲ್ಲಿರುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ಕಚೇರಿ ಎದುರು ನಡೆಸುತ್ತಿದ್ದ ಹೋರಾಟವನ್ನು ಸ್ಥಗಿತಗೊಳಿಸಲಾಗಿದೆ. ರೈತ ಮುಖಂಡರು ಹಾಗೂ ಪ್ರಹ್ಲಾದ್ ಜೋಶಿ ನಡುವೆ ನಡೆದ ಮಾತುಕತೆಯ ನಂತರ ಹೋರಾಟವನ್ನು ತಾತ್ಕಾಲಿಕವಾಗಿ ಕೊನೆಗೊಳಿಸಲು ಹೋರಾಟಗಾರರು ನಿರ್ಧರಿಸಿದರು. ಸಚಿವ ಜೋಶಿ ಅವರು ಕೊಟ್ಟ ಮಾತಿನಂತೆ ನಡೆಯಬೇಕು. ಕಾಲಮಿತಿಯಲ್ಲಿ ಯೋಜನೆ ಜಾರಿಗೆ ತರಲು ಕ್ರಮ ಕೈಗೊ ಳ್ಳಬೇಕು. ಇಲ್ಲದಿದ್ದಲ್ಲಿ ಮತ್ತೆ ಹೋರಾಟ ಆರಂಭಿಸುವ ಎಚ್ಚರಿಕೆಯನ್ನು ಹೋರಾಟಗಾರರು ನೀಡಿದ್ದಾರೆ.

# ಪಿಎಸ್ಐ ಹುದ್ದೆಗೆ ಆಯ್ಕೆಯಾದವರಿಗೆ ನೇಮಕಾತಿ ಆದೇಶ : ಪರಮೇಶ್ವರ್



ಬೆಂಗಳೂರು: ಪೊಲೀಸ್ ಸಬ್‌ಇನ್ಸೆಕ್ಟರ್ (ಪಿಎಸ್ಐ) ಹುದ್ದೆಗೆ ಆಯ್ಕೆಯಾದವರಿಗೆ ವಾರದೊಳಗೆ ನೇಮಕಾತಿ ಆದೇಶ ನೀಡಲು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಸೂಚನೆ ನೀಡಿದ್ದಾರೆ. ಪೊಲೀಸ್ ಸಬ್ ಇನ್ಸೆಕ್ಟರ್ ಹುದ್ದೆಗೆ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿದ್ದರೂ ನೇಮಕಾತಿ ವಿಳಂಬವಾಗಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿರುವ ಸಚಿವರು, ವಾರದೊಳಗೆ ನೇಮಕಾತಿ ಆದೇಶ ನೀಡುವಂತೆ ಇಲಾಖೆಯ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ. ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ನೇಮಕಾತಿ ವಿಭಾಗದ ಎಡಿಜಿಪಿ ಮುರುಗನ್ ಹಾಗೂ ಇತರೆ ಅಧಿಕಾರಿಗಳೊಂದಿಗೆ ಶುಕ್ರವಾರ ಗೃಹ ಸಚಿವರು ಸಭೆ ನಡೆಸಿದ್ದಾರೆ.

# ಹಾವೇರಿ ಜಿಲ್ಲೆಯ ಹಲವೆಡೆ ಯೂರಿಯಾ ಅಕ್ರಮ ದಾಸ್ತಾನು




ಹಾವೇರಿ: ಜಿಲ್ಲೆಯ ಹಲವು ಕಡೆಗಳಲ್ಲಿ ಯೂರಿಯಾ ಗೊಬ್ಬರವನ್ನು ಅಕ್ರಮವಾಗಿ ದಾಸ್ತಾನು ಮಾಡಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಅವರು ದಿಢೀರ್ ಪರಿಶೀಲನೆ ನಡೆಸಿದರು. ಕೃಷಿ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸರ ಜೊತೆಯಲ್ಲಿ ಜಿಲ್ಲೆಯ ಗೋದಾಮುಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿ ದಾಸ್ತಾನು ಬಗ್ಗೆ ಮಾಹಿತಿ ಪಡೆದುಕೊಂಡರು. ಪೂರೈಕೆ, ಸಂಗ್ರಹ ಹಾಗೂ ಮಾರಾಟದ ಬಗ್ಗೆ ದಾಖಲೆ ಸಮೇತ ವಿವರಣೆ ಪಡೆದರು. ಜಿಲ್ಲೆಯಲ್ಲಿ ಯೂರಿಯಾ ಗೊಬ್ಬರದ ಅಭಾವ ಇರುವುದಾಗಿ ರೈತರು ದೂರುತ್ತಿದ್ದರು. ಹಲವು ಗೋದಾಮುಗಳಲ್ಲಿ ಪರಿಶೀಲಿಸಿದರು.

# ಉತ್ತರಾಖಂಡದ ಧರಾಲಿ ಗ್ರಾಮದಲ್ಲಿ ಮೇಘಸ್ಫೋಟ : ದಿಢೀರ್ ಪ್ರವಾಹ




ಡೆಹ್ರಾಡೂನ್: ಉತ್ತರಾಖಂಡದ ಉತ್ತರಕಾಶಿಯಲ್ಲಿರುವ ಧರಾಲಿ ಗ್ರಾಮದಲ್ಲಿ ದಿಢೀರ್ ಪ್ರವಾಹ ಉಂಟಾಗಿ ಅನೇಕ ಮನೆಗಳು ಕೊಚ್ಚಿ ಹೋಗಿದ್ದು, ಕನಿಷ್ಠ 4 ಜನರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಖೀರ್‌ಗಂಗಾ ನದಿಯಲ್ಲಿ ಉಂಟಾದ ಪ್ರವಾಹದಿಂದಾಗಿ ಧರಾಲಿ ಗ್ರಾಮದ ಶಿಖರ ಪ್ರದೇಶದಲ್ಲಿ ಉಂಟಾದ ಭೂ ಕುಸಿತದಿಂದ ಮಣ್ಣು ಮಿಶ್ರಿತ ನೀರಿನ ಪ್ರವಾಹಕ್ಕೆ ಗ್ರಾಮದ ಹಲವು ಮನೆಗಳು ಕೊಚ್ಚಿ ಹೋಗಿದೆ ಎಂದು ಸೇನೆ ತಿಳಿಸಿದೆ. ಸ್ಥಳಕ್ಕೆ ದೌಡಾಯಿಸಿದ ಸೇನಾ ಸಿಬ್ಬಂದಿ ಘಟನೆಯಿಂದ ನಾಪತ್ತೆಯಾದ ಜನರ ಶೋಧ ಕಾರ್ಯಾಚರಣೆಗಿಳಿದರು. ಇಲ್ಲಿದ್ದ 20–25 ಹೋಟೆಲ್, ಹೋಮ್‌ಸ್ಟೇ ಎಲ್ಲವೂ ಕೊಚ್ಚಿಹೋಗಿವೆ.

# ರಾಹುಲ್ ಗಾಂಧಿಗೆ ಸುಪ್ರೀಂಕೋರ್ಟ್ ತರಾಟೆ



ನವದೆಹಲಿ: 'ಭಾರತದ ಭೂಮಿಯನ್ನು ಚೀನಾ ಆಕ್ರಮಿಸಿಕೊಂಡಿದೆ' ಎಂಬ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಹೇಳಿಕೆಗೆ ಸುಪ್ರೀಂ ಕೋರ್ಟ್ ತರಾಟೆಗೆ ತೆಗೆದುಕೊಂಡಿದೆ. ಇಂತಹ ವಿಷಯಗಳನ್ನು ಸಂಸತ್ತಿನಲ್ಲಿ ಪ್ರಶ್ನಿಸುವ ಬದಲು ಸಾಮಾಜಿಕ ಜಾಲತಾಣಗಳಲ್ಲಿ ಚರ್ಚಿಸುವುದೇಕೆ? ಎಂದು ಕೇಳಿದೆ. "ನಿಮ್ಮ ಬಳಿ ಪುರಾವೆಗಳಿವೆಯೇ? ಯಾವುದೇ ಸಾಕ್ಷ್ಯಗಳಿಲ್ಲದೇ ಇಂತಹ ಹೇಳಿಕೆಗಳನ್ನು ಯಾಕೆ ನೀಡುತ್ತೀರಿ? ನೀವು ನಿಜವಾದ ಭಾರತೀಯರಾಗಿದ್ದರೆ, ಇದನ್ನೆಲ್ಲಾ ಹೇಳುವುದಿಲ್ಲ" ಎಂದು ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಎ.ಜಿ.ಮಸಿಹ್ ಅವರಿದ್ದ ಪೀಠವು ವಿಪಕ್ಷ ನಾಯಕನನ್ನು ತರಾಟೆಗೆ ತೆಗೆದುಕೊಂಡಿದೆ.

# ಆನ್ಲೈನ್ ಬೆಟ್ಟಿಂಗ್ : ಎಲ್ಲಾ ರಾಜ್ಯಗಳಿಗೆ ನೋಟಿಸ್ ಜಾರಿ



ನವದೆಹಲಿ : ಆನ್‌ಲೈನ್ ಬೆಟ್ಟಿಂಗ್ ನಿಷೇಧಿಸಬೇಕೆಂಬ ಬೇಡಿಕೆಯ ಕುರಿತು ಸುಪ್ರೀಂಕೋರ್ಟ್ ಎಲ್ಲಾ ರಾಜ್ಯಗಳಿಗೆ ನೋಟಿಸ್ ಜಾರಿ ಮಾಡಿದೆ. ಈ ವಿಷಯದಲ್ಲಿ ಕೇಂದ್ರಕ್ಕೆ ಈಗಾಗಲೇ ಉತ್ತರ ಕೇಳಲಾಗಿದೆ. ಆಗಸ್ಟ್ 18ರಂದು ವಿಚಾರಣೆ ನಡೆಸಲಾಗುವುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ವಿಚಾರಣೆಯಲ್ಲಿ ಆನ್‌ಲೈನ್ ಬೆಟ್ಟಿಂಗ್ ನಿಷೇಧವನ್ನು ವ್ಯಾಪಕ ಸಾರ್ವಜನಿಕ ಹಿತಾಸಕ್ತಿಯ ವಿಷಯವೆಂದು ಕರೆದ ಸುಪ್ರೀಂಕೋರ್ಟ್ ರಾಜ್ಯಗಳಲ್ಲದೆ ಭಾರತೀಯ ರಿಸರ್ವ್ ಬ್ಯಾಂಕ್, ಜಾರಿ ನಿರ್ದೇಶನಾಲಯ (ಇಡಿ), ಭಾರತೀಯ ದೂರಸಂಪರ್ಕ ನಿಯಂತ್ರಣ ಪ್ರಾಧಿಕಾರ (ಟ್ರಾಯ್) ಮತ್ತು ಕೆಲವು ಗೇಮಿಂಗ್ ಕಂಪನಿಗಳಿಗೆ ನೋಟಿಸ್ ನೀಡಿದೆ.

# ರಷ್ಯಾದೊಂದಿಗಿನ ನಮ್ಮ ಸಂಬಂಧವು ಸ್ಥಿರವಾಗಿದೆ–ಭಾರತ



ನವದೆಹಲಿ: ರಷ್ಯಾದಿಂದ ತೈಲ ಖರೀದಿ ಹಿಂದಿನಂತೆಯೇ ಮುಂದುವರಿಸಲಾಗಿದೆ ಎಂದು ಭಾರತ ಸ್ಪಷ್ಟನೆ ನೀಡುವ ಮೂಲಕ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸುಂಕ ಬೆದರಿಕೆಗೆ ದಿಟ್ಟ ತಿರುಗೇಟು ನೀಡಿದೆ. ಭಾರತೀಯ ವಿದೇಶಾಂಗ ಸಚಿವಾಲಯ ಹೇಳಿಕೆ ಬಿಡುಗಡೆ ಮಾಡಿದ್ದು, "ರಷ್ಯಾದೊಂದಿಗಿನ ನಮ್ಮ ಸಂಬಂಧವು ಸ್ಥಿರ ಮತ್ತು ಸಮಯೋಚಿ ತವಾಗಿದೆ. ಇದನ್ನು 3ನೇ ರಾಷ್ಟ್ರದ ದೃಷ್ಟಿಕೋನದ ಮೂಲಕ ನೋಡಲು ಸಾಧ್ಯವಿಲ್ಲ" ಎಂದು ಹೇಳಿದೆ. ಈ ಕುರಿತು ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಭಾರತೀಯ ವಿದೇಶಾಂಗ ಇಲಾಖೆಯ ವಕ್ತಾರ ರಣಧೀರ್ ಜೈಸ್ವಾಲ್ ರಷ್ಯಾದಿಂದ ತೈಲ ಖರೀದಿಯನ್ನು ನಿಲ್ಲಿಸಿಲ್ಲ ಎಂದರು.

# ಶಿವನ ಆಶೀರ್ವಾದದಿಂದ ಪ್ರತೀಕಾರ ಪೂರ್ಣಗೊಂಡಿದೆ–ನರೇಂದ್ರ ಮೋದಿ



ವಾರಣಾಸಿ: ಪಹಲ್ಗಾಮ್ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳುವ ಭರವಸೆಯನ್ನು ಆಪರೇಷನ್ ಸಿಂಧೂರ್ ಮೂಲಕ ಶಿವನ ಆಶೀರ್ವಾದದಿಂದ ಪೂರ್ಣಗೊಂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ತಮ್ಮ ಸಂಸದೀಯ ಕ್ಷೇತ್ರಕ್ಕೆ ಆಗಮಿಸಿರುವ ಪ್ರಧಾನಿ ಮೋದಿ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ್ದಾರೆ. ಪಹಲ್ಗಾಮ್‌ನಲ್ಲಿ ಉಗ್ರರು ದಾಳಿ ನಡೆಸಿ, 26 ಜನರನ್ನು ಹತ್ಯೆ ನಡೆಸಿದಾಗ ನನ್ನ ಹೃದಯ ನೋವಿನಲ್ಲಿ ಮುಳುಗಿತ್ತು. ಆ ಮಹಾದೇವನ ಆಶೀರ್ವಾದದೊಂದಿಗೆ ನಮ್ಮ ಹೆಣ್ಣುಮಕ್ಕಳ ಸಿಂಧೂರ ಅಳಿಸಿದವರ ವಿರುದ್ಧ ಪ್ರತೀಕಾರ ತೀರಿಸಿಕೊಳ್ಳುವ ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಯಶಸ್ಸನ್ನು ನಾನು ಆ ಮಹಾದೇವನ ಪಾದಕ್ಕೆ ಸಮರ್ಪಿಸುತ್ತೇನೆ ಎಂದರು.

# ಕೃಷಿಕರ ಹಿತಾಸಕ್ತಿ ಕಾಪಾಡುವುದು ಭಾರತದ ಪ್ರಮುಖ ಆದ್ಯತೆ



ನವದೆಹಲಿ: ಭಾರತವು ಎಂದಿಗೂ ತನ್ನ ಕೃಷಿಕರು, ಮೀನುಗಾರರು, ಹೈನು ಕೃಷಿಕರ ಹಿತಾಸಕ್ತಿಯಲ್ಲಿ ಬೇರೆಯವರೊಂದಿಗೆ ಹೊಂದಾಣಿಕೆ ಮಾಡಿಕೊಂಡಿಲ್ಲ. ಈ ಕುರಿತು ಖಚಿತಪಡಿಸಲು ಯಾವುದೇ ಬೆಲೆ ತೆರಲು ಸಿದ್ಧವಾಗಿರುವುದಾಗಿ ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟಪಡಿಸಿದ್ದಾರೆ. ಅಮೆರಿಕ ಭಾರತದ ಆಮದು ವಸ್ತುಗಳ ಮೇಲೆ ಹೆಚ್ಚುವರಿಯಾಗಿ ಶೇ 25ರಷ್ಟು ಸುಂಕ ವಿಧಿಸುವ ಕುರಿತು ಘೋಷಣೆ ಹೊರಬಿದ್ದ ಬೆನ್ನಲ್ಲೇ ಪ್ರಧಾನಿಯಿಂದ ಈ ಹೇಳಿಕೆ ಬಂದಿದೆ. ಅಮೆರಿಕದ ಈ ಸುಂಕದಲ್ಲಿ ಕೃಷಿ ಉತ್ಪನ್ನಗಳ ಮೇಲಿನ ಸುಂಕ ಕೂಡ ಒಳಗೊಂಡಿದೆ. ಭಾರತ ಈ ವಿಚಾರದಲ್ಲಿ ಯಾವುದೇ ಕಾರಣಕ್ಕೂ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ ಪ್ರಧಾನಿ ನರೇಂದ್ರ ಮೋದಿ ಹೇಳಿದರು.



# ಕರಾವಳಿ ತರಂಗಿಣಿ ಕಲಾ ತರಂಗಿಣಿ



## ‘ತಾಯವ್ವ’ ನಟಿ ಗೀತಪ್ರಿಯ ಈಗ ‘ಅಪರಿಚಿತೆ’

ಈ ಮೊದಲು ‘ತಾಯವ್ವ’ ಎಂಬ ಸಿನಿಮಾದಲ್ಲಿ ನಟಿಸಿದ್ದ, ಗೀತಪ್ರಿಯ ಸುರೇಶ್ ಕುಮಾರ್ ಇದೀಗ ಮತ್ತೊಂದು ಚಿತ್ರದಲ್ಲಿ ಅಭಿನಯಿಸುತ್ತಿದ್ದಾರೆ. ಆ ಚಿತ್ರದ ಹೆಸರು ‘ಅಪರಿಚಿತೆ’. ಹೌದು ಇತ್ತೀಚಿಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾಜಿ ಉಪಮುಖ್ಯಮಂತ್ರಿ, ಶಾಸಕ ಸಿ.ಎನ್. ಅಶ್ವಥ್ ನಾರಾಯಣ ‘ಅಪರಿಚಿತ’ ಶೀರ್ಷಿಕೆ ಪೋಸ್ಟರ್ ಬಿಡುಗಡೆ ಮಾಡಿ, ‘ಸಿನಿಮಾ ಪವರ್ ಫುಲ್ ಮೀಡಿಯಾ. ಸಾಮಾಜಿಕ ಸಂದೇಶ ಇರುವ ಇಂತ ಸಿನಿಮಾ ಹೆಚ್ಚಾಗಿ ಬರಬೇಕು. ಆಗ ಜನ ಹಾಗೂ ಇಂಡಸ್ಟ್ರಿ ಚನ್ನಾಗಿ ಇರುತ್ತದೆ’ ಎಂದು ಶುಭ ಹಾರೈಸಿದರು. ನಂತರ ಚಿತ್ರದಲ್ಲಿ ಪ್ರಮುಖ ಪಾತ್ರ ನಿರ್ವಹಿಸುತ್ತಿರುವ ಗೀತಪ್ರಿಯ ಮಾತನಾಡಿ, ‘ನನಗೆ ಸಾಮಾಜಿಕ ಸಂದೇಶ ಇರುವಂತಹ ಸಿನಿಮಾಗಳಲ್ಲಿ ನಟಿಸಲು ತುಂಬಾ ಇಷ್ಟ. ಇದೂ ಕೂಡಾ ಸಾಮಾಜಿಕ ಸಂದೇಶ ಇರುವಂತ ಸಿನಿಮಾ. ಹಾಗಾಗಿ ನಾನು ನಟನೆ ಮಾಡುತ್ತಿದ್ದೇನೆ. ನಾಳೆಯಿಂದ ಚಿತ್ರೀಕರಣ ಶುರುವಾಗುತ್ತಿದೆ. ಕರ್ನಾಟಕದಲ್ಲಿಯೇ ಚಿತ್ರೀಕರಣ ನಡೆಯಲಿದೆ. "ಅಪರಿಚಿತ" ನೈಜ ಘಟನೆ ಆಧಾರಿತ ಚಿತ್ರವಾಗಿದ್ದು, ನಾನು ಶಿಕ್ಷಕಿ ಪಾತ್ರ ಮಾಡುತ್ತಿದ್ದೇನೆ ಎಂದು ಹೇಳಿದರು. ಈ ಚಿತ್ರವನ್ನು ವಿಶ್ವನಾಥ ನಿರ್ದೇಶನ ಮಾಡುತ್ತಿದ್ದಾರೆ. ಇವರು ಈಗಾಗಲೇ ‘ಹನುಮಂತಪ್ಪನ ಎರಡು ಎಕರೆ ಜಾಗ’ ಸಿನಿಮಾ ನಿರ್ದೇಶನ ಮಾಡಿದ್ದು ಬಿಡುಗಡೆಗೆ ಸಿದ್ದವಿದೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಿರ್ದೇಶಕರು, ‘ಇದು ನೈಜ ಕಥೆ ಆಧಾರಿತ ಸಿನಿಮಾ. ಸಿಂಧೂ ಲೋಕನಾಥ್, ಆರ್.ಜೆ. ನಿಖಿತಾ, ಹಿರಿಯ ನಟ ಶ್ರೀನಾಥ್ ಹಾಗೂ ಶ್ರೀನಾಥ್ ಅವರ ಮಗ ರೋಹಿತ ಕೂಡ ಪ್ರಮುಖ ಪಾತ್ರ ಮಾಡುತ್ತಿದ್ದಾರೆ. ಇದ್ದು ಥ್ರಿಲ್ಲರ್ ಚಿತ್ರ ಆಗಿರುತ್ತದೆ. ನಾಳೆಯಿಂದ ಚಿತ್ರೀಕರಣ ಶುರು ಮಾಡಿ ಅಕ್ಟೋಬರ್‌ನಲ್ಲಿ ಚಿತ್ರ ಬಿಡುಗಡೆ ಮಾಡುವ ಯೋಜನೆ ಇದೆ’ ಎಂದರು. ‘ನನ್ನ ಹೆಂಡತಿ ಸೋಶಿಯಲ್ ಮೆಸೇಜ್ ಇರುವಂತ ಸಿನಿಮಾಗಳನ್ನು ಮಾಡುತ್ತಿರುವುದು ಖುಷಿ ಇದೆ. ಅವರ ಮೊದಲ ಸಿನಿಮಾ ನೋಡಿ ತುಂಬಾ ಖುಷಿ ಆಯ್ತು ಎಂದರು



## ಜೋಗಿ ನಿರ್ಮಾಪಕನ ಹೊಸ ಹೆಜ್ಜೆ

ಕಳೆದ 40ವರ್ಷಗಳಿಂದ ಅಶ್ವಿನಿ ಆಡಿಯೋ ಕಂಪನಿ ನಡೆಸಿಕೊಂಡು ಬರುತ್ತಿರುವ ಅಶ್ವಿನಿ ರಾಮಪ್ರಸಾದ್ ಅವರೀಗ ಕಿರುತೆರೆ ಕ್ಷೇತ್ರಕ್ಕೂ ಎಂಟ್ರಿ ಕೊಟ್ಟಿದ್ದಾರೆ. ದಶಕಗಳ ಹಿಂದೆ ಸಾವಿರಾರು ಜಾನಪದ, ಭಕ್ತಿಗೀತೆಗಳನ್ನು ತಮ್ಮ ಆಡಿಯೋ ಕಂಪನಿ ಮೂಲಕ ಜನರಿಗೆ ಕೇಳಿಸಿದ ರಾಮ್‌ಪ್ರಸಾದ್ ಅವರಿಗೆ ಮೊದಲಿಂದಲೂ ಕಿರುತೆರೆ ಬಗ್ಗೆ ಆಸಕ್ತಿಯಿತ್ತು. ಆದಕ್ಕೆ ಸುವರ್ಣ ವಾಹಿನಿ ಒಂದು ವೇದಿಕೆ ಕಲ್ಪಿಸಿಕೊಟ್ಟಿದೆ. ಶಿವಣ್ಣ, ಪ್ರೇಮ್ ಕಾಂಬಿನೇಶನ್‌ನ ಜೋ ಗಿ ಚಿತ್ರ ನಿರ್ಮಿಸುವ ಮೂಲಕ ದಾಖಲೆ ಬರೆದ ಅಶ್ವಿನಿ ರಾಮ್ ಪ್ರಸಾದ್ ಆನಂತರವೂ ಹಲವಾರು ಯಶಸ್ವೀ ಚಲನಚಿತ್ರಗಳನ್ನು ನಿರ್ಮಿಸಿದ್ದರು. ಅಲ್ಲದೆ ಫಾರ್ಗ ಚಿತ್ರದ ಮೂಲಕ ತಮ್ಮ ಪುತ್ರನನ್ನೂ ಹೀರೋ ಮಾಡುತ್ತಿದ್ದಾರೆ. ಇದೆಲ್ಲದರ ನಡುವೆ ಇದೀಗ ಧಾರ್ಮಿಕ ಹಾಗೂ ವಾಸ್ತುಶಾಸ್ತ್ರದ ಹಿನ್ನೆಲೆಯ "ಸುವರ್ಣ ಸಂಕಲ್ಪ ಅಮೃತಘಳಿಗೆ" ಕಾರ್ಯಕ್ರಮ ನಿರ್ಮಾಣದ ಸಂಪೂರ್ಣ ಜವಾಬ್ದಾರಿ ಹೊತ್ತುಕೊಂಡಿದ್ದಾರೆ. ಈ ಕಾರ್ಯಕ್ರಮವನ್ನು ಕರ್ನಾಟಕ ಜ್ಯೋತಿಷ್ಯರತ್ನ ಪ್ರಶಸ್ತಿ ಪುರಸ್ಕೃತರಾದ ವಿಶ್ವನಾಥ ಭಾಗವತ ಗುರೂಜಿಯವರು ನಡೆಸಿಕೊಡಲಿದ್ದಾರೆ. ಗಾಯಕಿಯೂ ಆದ ಅಖಿಲಾ ನಿರೂಪಣೆಯ ಜವಾಬ್ದಾರಿ ಹೊತ್ತಿದ್ದಾರೆ. ಆಗಸ್ಟ್ 4ರಿಂದ ಪ್ರತಿದಿನ ಬೆ.7–30ಕ್ಕೆ ಸುವರ್ಣ ಸಂಕಲ್ಪ ಅಮೃತಘಳಿಗೆ ಪ್ರಸಾರವಾಗಲಿದೆ. ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾತನಾಡಿದ ರಾಮ್‌ಪ್ರಸಾದ್ ಈಗಾಗಲೇ 6 ವರ್ಷಗಳಿಂದ ನಡೆದುಕೊಂಡು ಬಂದಿರುವ ಕಾರ್ಯಕ್ರಮವಿದು. ಇದರ ನಂತರ ನಾವೇನು ಮಾಡಬೇಕು ಅಂತ ಪ್ಲಾನ್ ಮಾಡುತ್ತಿದ್ದೇವೆ. ರಾಜ್ಯದ, ದೇಶದ ಎಲ್ಲಾ ಪ್ರಖ್ಯಾತ ದೇವಸ್ಥಾನಗಳಿಗೂ ವಿಸಿಟ್ ಮಾಡಬೇಕೆಂಬ ಪ್ಲಾನಿದೆ. ಅಲ್ಲದೆ ನಮಗೆ ಯಾರೇ ಕಾಲ್ ಮಾಡಿದರೂ ಬಡವ, ಬಲ್ಲಿದ ಅಂತ ನೋಡದೆ ಅವರ ಮನೆಗಳಿಗೆ ಹೋಗಿ ವಾಸ್ತು ಪರಿಹಾರ ಸೂಚಿಸುತ್ತೇವೆ ಎಂದು ಹೇಳಿದರು. ಇದರ ಜತೆಗೆ ಸಂಜೀವಿನಿ ಸಂಕಲ್ಪ, ಯೋಗ ಸಂಕಲ್ಪ, ಮಂತ್ರ ಸಂಕಲ್ಪ ಹೀಗೆ ಅನೇಕ ಶೀರ್ಷಿಕೆಯಡಿ ಈ ಕಾರ್ಯಕ್ರಮ ನಡೆಯಲಿದೆ.



## ಕರಾವಳಿ ಭಾಗದಲ್ಲಿ ಕಥೆಗೆ ಲೂಸ್ ಮಾದ ನಾಯಕ

ಕನ್ನಡದ ಅತ್ಯಂತ ಜನಪ್ರಿಯ ಚಿತ್ರಗಳಲ್ಲಿ ಒಂದಾದ ‘ದುನಿಯಾ’ ಚಿತ್ರದಲ್ಲಿ ‘ಲೂಸ್ ಮಾದ’ ಎಂಬ ಪಾತ್ರವನ್ನು ಯೋಗೇಶ್ ಅವರು ಮಾಡಿದ್ದರು. ಆ ಪಾತ್ರಕ್ಕೆ ನೋಡುಗರು ಫಿದಾ ಆದರು ಅಂದಿನಿಂದಲೂ ‘ಲೂಸ್ ಮಾದ’ ಯೋಗೇಶ್ ಅಂತಲೇ ಯೋಗೇಶ್ ಜನಪ್ರಿಯರಾದರು. ಈಗ ‘ಲೂಸ್ ಮಾದ’ ಚಿತ್ರದ ಶೀರ್ಷಿಕೆಯಾಗಿದೆ. ಈ ಚಿತ್ರದ ನಾಯಕನಾಗಿ ಯೋಗೇಶ್ ಅವರೆ ಅಭಿನಯಿಸುತ್ತಿದ್ದಾರೆ. ಜಾನಕಿ ಕಂಬೈನ್ಸ್ ಲಾಂಛನದಲ್ಲಿ ಧರ್ಮೇಂದ್ರ ಅವರು ನಿರ್ಮಿಸುತ್ತಿರುವ ಈ ಚಿತ್ರವನ್ನು ರಂಜಿತ್ ಕುಮಾರ್ ಗೌಡ ನಿರ್ದೇಶಿಸುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಮುಹೂರ್ತ ಸಮಾರಂಭ ಬಂಡೆ ಮಹಾಂಕಾಳಿ ದೇವಸ್ಥಾನದಲ್ಲಿ ನೆರವೇರಿತು. ಯೋಗೇಶ್ ತಂದೆ, ನಿರ್ಮಾಪಕ ಟಿ.ಪಿ.ಸಿದ್ದರಾಜು ಮೊದಲ ಸನ್ನಿವೇಶಕ್ಕೆ ಆರಂಭ ಫಲಕ ತೋರಿದರು. ಚಿತ್ರದ ನಿರ್ಮಾಪಕ ಧರ್ಮೇಂದ್ರ ಅವರೆ ಕ್ಯಾಮೆರಾ ಚಾಲನೆ ಮಾಡಿದರು. ಉದಯ್ ಶೆಟ್ಟಿ, ಉಮೇಶ್ ಶೆಟ್ಟಿ, ರಘು ಗುಜ್ಜಲ್ ಮುಂತಾದ ಗಣ್ಯರು ಹಾಗೂ ಚಿತ್ರತಂಡದ ಸದಸ್ಯರು ಮುಹೂರ್ತ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಸಾಹಿತ್ಯ ಯೋಗೇಶ್ ಅವರು ಮುಹೂರ್ತ ಸಮಾರಂಭಕ್ಕೆ ಆಗಮಿಸಿದ್ದರು. ಸಿನಿಮಾ ಮುಹೂರ್ತದ ನಂತರ ಚಿತ್ರತಂಡದ ಸದಸ್ಯರು ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ಕುರಿತು ಮಾತನಾಡಿದರು. ನಾನು ಮೂಲತಃ ಮಂಗಳೂರಿನವನು. ವೃತ್ತಿಯಲ್ಲಿ ಕಂಟ್ರ್ಯಾಕ್ಟರ್. ಸಿನಿಮಾರಂಗ ನನಗೆ ಹೊಸತು ಎಂದರು ನಿರ್ಮಾಪಕ ಧರ್ಮೇಂದ್ರ..



## ಉಪೇಂದ್ರಗೆ ಮಾಲಾಶ್ರೀ ಪುತ್ರಿ ಆರಾಧನಾ ಜೋಡಿ

ತರುಣ್ ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ತರುಣ್ ಶಿವಪ್ಪ ನೆಕ್ಸ್ಟ್ ಲೆವೆಲ್ ಸಿನಿಮಾ ನಿರ್ಮಾಣಕ್ಕೆ ಮುಂದಾಗಿದ್ದಾರೆ. ವಿಭಿನ್ನತೆಗೆ ಹೆಸರುವಾಸಿಯಾಗಿರುವ ರಿಯಲ್ ಸ್ಟಾರ್ ಉಪೇಂದ್ರ ಈ ಚಿತ್ರದ ನಾಯಕರು. ಅರವಿಂದ್ ಕೌಶಿಕ್ ನಿರ್ದೇಶನದ ನೆಕ್ಸ್ಟ್ ಲೆವೆಲ್ ಸಿನಿಮಾಗೀಗ ನಾಯಕಿ ಸಿಕ್ಕಿದ್ದಾರೆ. ಪ್ಯಾನ್ ಇಂಡಿಯಾ ಚಿತ್ರವಾಗಿರುವ ನೆಕ್ಸ್ಟ್ ಲೆವೆಲ್‌ಗೆ ಮಾಲಾಶ್ರೀ ಪುತ್ರಿ ಆರಾಧನಾ ನಾಯಕಿ. ಕಾಟೇರ ಸಿನಿಮಾ ಮೂಲಕ ಕನ್ನಡ ಚಿತ್ರರಂಗಕ್ಕೆ ಹೆಜ್ಜೆ ಇಟ್ಟಿದ್ದ ಆರಾಧನಾ ಮೊದಲ ಚಿತ್ರದಲ್ಲಿಯೇ ತಮ್ಮ ನಟನಾ ಪರಿಚಯಿಸಿದ್ದರು. ಮೊದಲ ಸಿನಿಮಾದಲ್ಲಿಯೇ ದರ್ಶನ್ ಅವರಂತಹ ಸ್ಟಾರ್ ಹೀರೋಗೆ ಜೋಡಿಯಾಗಿ ಅಭಿನಯಿಸಿದ್ದರು. ಇದೀಗ ಎರಡನೇ ಚಿತ್ರದಲ್ಲಿಯೂ ಸೂಪರ್‌ಸ್ಟಾರ್ ಉಪೇಂದ್ರ ಅವರಿಗೆ ನಾಯಕಿಯಾಗಿ ಸಾಥ್ ಕೊಡಲಿದ್ದಾರೆ. ಬೆಂಗಳೂರಿನಲ್ಲಿಯೇ ‘ನೆಕ್ಸ್ಟ್ ಲೆವೆಲ್’ ಸಿನಿಮಾದ ಅದ್ದೂರಿ ಮುಹೂರ್ತ ನಡೆಯಲಿದ್ದು, ಬೆಂಗಳೂರು, ಮುಂಬೈ, ಹೈದರಾಬಾದ್ ಸೇರಿದಂತೆ ಭಾರತದ ಹಲವು ಕಡೆ ಚಿತ್ರದ ಶೂಟಿಂಗ್ ನಡೆಯಲಿದೆ. ಸಿನಿಮಾದ ಹೆಚ್ಚಿನ ಭಾಗ ವಿಎಫ್‌ಎಕ್ಸ್‌ನಿಂದ ಕೂಡಿರಲಿದೆ. ಇದಕ್ಕಾಗಿ ಈ ಚಿತ್ರತಂಡವು ಕೆನಡಾ ಸೇರಿದಂತೆ ಅನೇಕ ವಿದೇಶಿ ಗ್ರಾಫಿಕ್ಸ್ ಸ್ಟುಡಿಯೋಗಳು ಹಾಗೂ ಭಾರತದ ಪ್ರತಿಷ್ಠಿತ ಗ್ರಾಫಿಕ್ಸ್ ನಿರ್ಮಾಣ ಸಂಸ್ಥೆಗಳ ಸಹಯೋಗದೊಂದಿಗೆ ಪ್ಯಾನ್ ಇಂಡಿಯಾ ಮಟ್ಟದ ಈ ದೊಡ್ಡ ಸಿನಿಮಾವನ್ನು ಕಡಿಮೆ ಅವಧಿಯಲ್ಲಿ ನಿರ್ಮಿಸುವ ಗುರಿ ಹೊಂದಿದೆ. ಉಪೇಂದ್ರ ಅಭಿನಯದ ಬ್ಲಾಕ್‌ಬಸ್ಟರ್ ‘ಎ’, ‘ಉಪೇಂದ್ರ’, ‘ರಕ್ತಕಣ್ಣೀರು’ ಸಿನಿಮಾಗಳ ಶೈಲಿಯಲ್ಲೇ ಈ ಸಿನಿಮಾ ಇರಲಿದೆ ಅನ್ನೋದು ಮತ್ತೊಂದು ವಿಶೇಷ.



## ವರಮಹಾಲಕ್ಷ್ಮೀ ಹಬ್ಬಕ್ಕೆ ರಾಜ ದ್ರೋಹಿ

ರಾಜ ದ್ರೋಹಿ ಚಿತ್ರದಲ್ಲಿ ಅನಂತನಾಗ್, ಲಕ್ಷ್ಮೀ ಅಭಿನಯ, ಶರಣ್ ಹಾಗೂ ಅವರ ತಂದೆ ತಾಯಿ ನಟನೆ ಮಾಡಿದ್ದಾರೆ. ಧನುಷ್ ಕಂಬೈನ್ಸ್ ಬ್ಯಾನರ್‌ದಲ್ಲಿ ಮಹದೇವಯ್ಯ ನಿರ್ಮಾಣ ಮಾಡಿದ್ದು, ಸಮರ್ಥರಾಜ್ ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಸಿನಿಮಾದ ಕುರಿತು ಹೇಳುವುದಾದರೆ ನಮ್ಮ ಎದುರುಗಡೆ ಬರುವ ಸಮಸ್ಯೆಗಳನ್ನು ಯಾವ ರೀತಿ ಎದುರಿಸುತ್ತಾರೆ. ಅಪ್ಪ–ಅಮ್ಮ ಕಣ್ಣ ಮುಂದೆ ಇದ್ದರೂ ಗುರುತಿಸಲಾಗದಂತ ಮಕ್ಕಳ ಪರಿಸ್ಥಿತಿ. ತಂದೆ–ತಾಯಿಗೆ ಇವರೇ ತಮ್ಮ ಮಕ್ಕಳೆಂದು ತಿಳಿದಿರುವುದಿಲ್ಲ. ಮುಂದೆ ಬೇರೆ ಬೇರೆ ಅವಘಡಗಳು ಸಂಭವಿಸಿದಾಗ, ಹೇಗೆಲ್ಲಾ ತಿರುವುಗಳು ಪಡೆದುಕೊಳ್ಳುತ್ತದೆ ಎಂಬುದು ಒಂದು ಏಳೆಯ ಸಾರಾಂಶವಾಗಿದೆ. ತಾರಾಗಣದಲ್ಲಿ ಅಭಿಜಿತ್, ಒರಟ ಪ್ರಶಾಂತ್, ನೀನಾಸಂ ಅಶ್ವಥ್, ಅಚ್ಯುತ ಕುಮಾರ್, ಕುರಿಬಾಂಡ್‌ಸುನಿಲ್, ಬ್ಯಾಂಕ್ ಜನಾರ್ಧನ್, ಪಟ್ರೆ ಅಜಿತ್, ಮಾನಸಿ, ಸುನಿತಾ ಶ್ರೀನಿವಾಸ್, ಲಲಿತಾ, ರಾಧಾಕೃಷ್ಣ, ಕುರಿ ಪ್ರತಾಪ್, ಶ್ರೀಲಕ್ಷ್ಮೀ ಮುಂತಾದವರು ನಟಿಸಿದ್ದಾರೆ.



## ಸ್ಟಾರ್ ಸುವರ್ಣದಲ್ಲಿ ನೀ ಇರಲು ಜೊತೆಯಲ್ಲಿ

ಕಿರುತೆರೆ ವೀಕ್ಷಕರಿಗೆ ಸದಾ ಹೊಸತನ್ನು ನೀಡುತ್ತಿರುವ ಸ್ಟಾರ್‌ಸುವರ್ಣ ವಾಹಿನಿಯು ಈಗ ಹೊಸ ಧಾರವಾಹಿ ‘ನೀ ಇರಲು ಜೊತೆಯಲ್ಲಿ’ ಪ್ರಸಾರ ಮಾಡಲು ಸಜ್ಜಾಗಿದೆ. ಮುದ್ದುಲಕ್ಷ್ಮೀ, ಮರಳಿ ಬಂದಳು ಸೀತೆ, ಮರಳಿ ಮನಸಾಗಿದೆ ಇನ್ನು ಮುಂತಾದ ಯಶಸ್ವಿ ಧಾರವಾಹಿಗಳನ್ನು ನಿರ್ದೇಶಿಸಿರುವ ಧರಣಿ ಜಿ. ರಮೇಶ್ ನಿರ್ಮಾಣ ಜತೆಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಸ್ವಾತಂತ್ರ ಹೋರಾಟಗಾರನ ಕುಟುಂಬದಲ್ಲಿ ಬೆಳೆದ ನಾಯಕ ಕೃಷ್ಣ ತಂತ್ರದಲ್ಲಿ ಕಪಟಿಯಾಗಿದ್ದರೂ, ಮಾಡಿದ ಸಹಾಯಕ್ಕೆ ಪ್ರತಿಫಲವನ್ನು ನಿರೀಕ್ಷಿಸದ ಆಧುನಿಕ ಯುಗದ ಶ್ರೀ ಕೃಷ್ಣ. ಆದರೆ ಅತ್ತಿಗೆ ಮನೆ ಮಂದಿಯ ರನ್ನೆಲ್ಲಾ ತನ್ನ ಕೈಗೊಂಬೆಯಾಗಿಸಿಕೊಂಡಿರುತ್ತಾಳೆ.



## ಪ್ರಕಾಶ್ ಬೆಳವಾಡಿ ಅವರಿಂದ ‘ಹಿಕೋರ’ ಚಿತ್ರದ ಟ್ರೇಲರ್ ಅನಾವರಣ

ರತ್ನ ಶ್ರೀಧರ್ ನಿರ್ಮಾಣದ, ನೀನಾಸಂ ಕಿಟ್ಟಿ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದು ನಿರ್ದೇಶಿಸಿರುವ ಹಾಗೂ ಪೂರ್ಣಚಂದ್ರ ತೇಜಸ್ವಿ ಸಂಗೀತ ಸಂಯೋಜಿಸಿರುವ "ಹಿಕೋರಾ" ಚಿತ್ರದ ಟ್ರೇಲರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನೆರವೇರಿತು. ಖ್ಯಾತ ರಂಗಕರ್ಮಿ, ನಟ ಹಾಗೂ ನಿರ್ದೇಶಕ ಪ್ರಕಾಶ್ ಬೆಳವಾಡಿ ಟ್ರೇಲರ್ ಅನಾವರಣ ಮಾಡಿದರು. ಹೆಸರಾಂತ ನಿರ್ದೇಶಕ ದಿನೇಶ್‌ಬಾಬು, ಮಾಜಿ ಶಾಸಕ ಬಾಲರಾಜ್, ವಿತರಕರ ಸಂಘದ ಅಧ್ಯಕ್ಷ ನವಶಕ್ತಿ ನಾಗರಾಜ್, ನಿರ್ಮಾಪಕರಾದ ಎ.ನರಸಿಂಹ, ಕಾಮಾಕ್ಷಿ ರಾಜು, ಕಾಮಾಕ್ಯ ಮುರಳಿ, ನಾಗೇಶ್ ಕುಮಾರ್, ಧನಲಕ್ಷ್ಮೀ ಗ್ರೂಪ್‌ನ ನಾರಾಯಣಸ್ವಾಮಿ ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.



## ವೆಬ್ ಸಿರೀಸ್ ನಿರ್ಮಾಣದತ್ತ ಕೆಆರ್‌ಜಿ ಸ್ಟುಡಿಯೊ

ಕಾರ್ತಿಕ್ ಗೌಡ ಹಾಗೂ ಯೋಗಿ ಜಿ ಗೌಡ ನೇತೃತ್ವದ ಕೆಆರ್ಜಿ ಸ್ಟುಡಿಯೋಸ್ ಕಡಿಮೆ ಅವಧಿಯಲ್ಲಿಯೇ ಸಿನಿಮಾ ನಿರ್ಮಾಣ ಹಾಗೂ ಸಿನಿಮಾ ವಿತರಣೆ ವಿಭಾಗದಲ್ಲಿ ಹೆಸರು ಗಳಿಸಿಕೊಂಡಿದೆ. ಭಿನ್ನ, ಗುಣಮಟ್ಟದ ಸಿನಿಮಾಗಳನ್ನು ಕನ್ನಡದಲ್ಲಿ ನಿರ್ಮಿಸುತ್ತಿರುವ ಕೆಆರ್ಜಿ ಈಗ ಮತ್ತೊಂದು ಹೊಸ ಹೆಜ್ಜೆ ಇಟ್ಟಿದೆ. ಚಿತ್ರ ನಿರ್ಮಾಣ ಹಾಗೂ ವಿತರಣೆಯಲ್ಲಿ ಹೆಸರು ಮಾಡಿರುವ ಕೆಆರ್‌ಜಿ ಸ್ಟುಡಿಯೋ ವೆಬ್ ಸಿರೀಸ್ ನಿರ್ಮಾಣಕ್ಕಿಳಿದೆ. Zee5 ಜೊತೆ ಕೈ ಜೋಡಿಸುವ ಮೂಲಕ ಕನ್ನಡ ಸಿನಿಪ್ರೇಕ್ಷಕರಿಗೆ ವೆಬ್ ಸರಣಿಗಳನ್ನು ಉಣಬಡಿಸುವ ತವಕದಲ್ಲಿದೆ. ಅದರ ಮೊದಲ ಭಾಗವಾಗಿ ಶೋಧ ಎಂಬ ವೆಬ್ ಸಿರೀಸ್‌ಗೆ ಕೆಆರ್‌ಜಿ ಬಂಡವಾಳ ಹೂಡಿದೆ. ಕೆಆರ್‌ಜಿ ಸ್ಟುಡಿಯೋಸ್ ನಿರ್ಮಿಸಿ, ಪ್ರೆಸೆಂಟ್ ಮಾಡುತ್ತಿರುವ ಶೋಧ ವೆಬ್ ಸರಣಿಗೆ ಸುನಿಲ್ ಮೈಸೂರು ಆಕ್ಷನ್ ಕಟ್ ಹೇಳಿದ್ದಾರೆ. ಇದು ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿದೆ. ಮನಸಾರೆ, ಪಂಚರಂಗಿ, ಲೈಫು ಇಷ್ಟೇನೆ ಮತ್ತು ಕಲ್ಟ್ ಸೈಕಲಾಜಿಕಲ್ ಥ್ರಿಲ್ಲರ್ ಲೂಸಿಯಾ ಸಿನಿಮಾಗಳ ಮೂಲಕ ನಟನೆ ಹಾಗೂ ನಿರ್ದೇಶನದಲ್ಲಿ ಹೆಸರು ಮಾಡಿರುವ ಪವನ್ ಕುಮಾರ್, ಶೋಧ ವೆಬ್ ಸರಣಿಯಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ.



## ಥಿಂಕ್ ಮ್ಯೂಸಿಕ್ ಕೈ ಸೇರಿದ ಪೀಟರ್ ಆಡಿಯೋ ಹಕ್ಕು

ಒಂದು ಸಿನಿಮಾಗೆ ಇನ್ವಿಟೇಷನ್ ಎಂದರೆ ಹಾಡುಗಳು. ಹಾಡು ಹಿಟ್ ಆದರೆ ಸಿನಿಮಾನೂ ಹಿಟ್ ಎಂಬ ಮಾತಿದೆ. ಈ ನಿಟ್ಟಿನಲ್ಲಿ ಪೀಟರ್ ಸಿನಿಮಾ ಸಂಗೀತಪ್ರಿಯರಿಗೆ ಒಳ್ಳೆ ಹಾಡುಗಳನ್ನು ನೀಡುವ ತವಕದಲ್ಲಿದೆ. ಅದರ ಮೊದಲ ಭಾಗವಾಗಿ ಮಲಯಾಳಂನಿಂದ ಪ್ರಣವಂ ಸಸಿ ಮತ್ತು ಬಾಲಿವುಡ್ ಖ್ಯಾತ ಗಾಯಕ ಅಜಯ್ ಗೋಗವಾಲೆ ಅವರನ್ನು ಕರೆಸಿ ಪೀಟರ್ ಗಾಗಿ ಹಾಡಿಸಲಾಗಿದೆ. ಹೀಗಿದ್ಮೇಲೆ ಪೀಟರ್ ಗಾನಬಜಾನಗಳ ಮೇಲೆ ನಿರೀಕ್ಷೆ ತುಸು ಹೆಚ್ಚಿದೆ. ಈಗ ಚಿತ್ರತಂಡ ದೊಡ್ಡ ಸುದ್ಧಿಯೊಂದನ್ನ ಹೊರಹಾಕಿದೆ. ದಕ್ಷಿಣ ಚಿತ್ರ ರಂಗದ ಪ್ರತಿಷ್ಠಿತ ಆಡಿಯೋ ಲೇಬಲ್ ‘ಥಿಂಕ್ ಮ್ಯೂಸಿಕ್’ ಪೀಟರ್ ಹಾಡುಗಳನ್ನು ಮೆಚ್ಚಿಕೊಂಡು ಆಡಿಯೋ ರೈಟ್ಸ್ ತಮ್ಮದಾಗಿಸಿಕೊಂಡಿದೆ.



## ಭಾರತದ ಮೊದಲ ಸಿನಿಮ್ಯಾಟಿಕ್ ಯೂನಿವರ್ಸ್

ಕನ್ನಡ ಚಿತ್ರರಂಗದ ಹೆಮ್ಮೆಯ ನಿರ್ಮಾಣ ಸಂಸ್ಥೆ ಹೊಂಬಾಳೆ ಫಿಲ್ಮ್ಸ್, ಭಾರತೀಯ ಸಿನಿಮಾರಂಗದಲ್ಲಿ ಕ್ರಾಂತಿಕಾರಿ ಹೆಜ್ಜೆ ಇಟ್ಟಿದೆ. ಅವರ ಹೊಸ ಅನಿಮೇಷನ್ ಚಿತ್ರ ’ಮಹಾವತಾರ ನರಸಿಂಹ’, ಅಶ್ವಿನ್ ಕುಮಾರ್ ನಿರ್ದೇಶನದಲ್ಲಿ ಮೂಡಿಬಂದು, ಭಾರತದಲ್ಲೇ ಅತಿ ಹೆಚ್ಚು ಗಳಿಸಿದ ಅನಿಮೇಷನ್ ಚಲನ ಚಿತ್ರ ಎಂಬ ಇತಿಹಾಸ ಬರೆದಿದೆ. ಸನಾತನ ಮೌಲ್ಯಗಳ ಜೊತೆಗೆ ಜಾಗತಿಕ ಗುಣಮಟ್ಟದ ಕಥಾ ನಿರೂಪಣೆಯನ್ನು ಬೆಸೆದು, ಈ ಚಿತ್ರ ಮಕ್ಕಳಿಂದ ದೊಡ್ಡವರವರೆಗೆ ಎಲ್ಲರ ಮನಸೂರೆಗೊಂಡಿದೆ. ಪುರಾಣ ಕಥೆಗಳಿಗೆ ಹೊಸ ದೃಶ್ಯವೈಭವ ನೀಡಿ, ಈ ಚಿತ್ರ ಎಲ್ಲರ ಹೃದಯದಲ್ಲಿ ಶಾಶ್ವತವಾಗಿ ಉಳಿದಿದೆ. ಹೊಂಬಾಳೆ ಫಿಲ್ಮ್ ಸಂಸ್ಥೆ ಹುಟ್ಟಿದ್ದು ಕರ್ನಾಟಕದ ಮಣ್ಣಿನಲ್ಲಿ. ’ರಾಜಕುಮಾರ’ ಚಿತ್ರದ ಮೂಲಕ ಯಶಸ್ಸಿನ ಹಾದಿ ಆರಂಭಿಸಿದ ಈ ಸಂಸ್ಥೆ, ತನ್ನ ಮೂಲ ಬೇರುಗಳಿಗೆ ಸದಾ ಅಂಟಿಕೊಂಡಿದೆ.






# ಮಲೆನಾಡಿನಲ್ಲಿ ಚಿತ್ರೀಕರಣ ಮುಗಿಸಿದ ಪರಮ್ ಗುಬ್ಬಿಯವರ ಮತ್ತೆ ಮಳೆ ಹೊಯ್ಯುತ್ತಿದೆ..

ತಂತ್ರಜ್ಞರು ಹೊರತುಪಡಿಸಿ, ಕಲಾವಿದರೆಲ್ಲರೂ ಹೊಸಬರಾಗಿರುವ 'ಮತ್ತೆ ಮಳೆ ಹೊಯ್ಯುತ್ತಿದೆ' ಸಿನಿಮಾದ ಶೂಟಿಂಗ್ ಮುಕ್ತಾಯವಾಗಿದ್ದರಿಂದ ಅನುಭವಗಳನ್ನು ಹಂಚಿಕೊಳ್ಳಲು ತಂಡವು ಮಾಧ್ಯಮದ ಮುಂದೆ ಹಾಜರಾಗಿತ್ತು. 'ಎಲ್ಲ ನೆನಪಾಗುತಿದೆ' ಎಂಬ ಅಡಿಬರಹವಿದೆ. ಮೂರು ದಶಕಗಳಿಂದ ಸಹಾಯಕ ಕಲಾ ನಿರ್ದೇಶಕರಾಗಿರುವ ಗಂಗಾಧರ್ ಶ್ರೀ ಗವಿರಂಗನಾಥ ಸ್ವಾಮಿ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಪತ್ನಿ ಸುಮ ಹೆಸರಿನಲ್ಲಿ ಬಂಡವಾಳ ಹೂಡುತ್ತಿದ್ದಾರೆ. ಶೃತಿ ಅನಿಲ್‌ಕುಮಾರ್ ಸಹ ನಿರ್ಮಾಪಕರು ಹಾಗೂ ಪ್ರಾಧ್ಯಾಪಕರ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಹಲವು ವರ್ಷಗಳಿಂದ ಸಿನಿಮಾ ರಂಗದಲ್ಲಿ ಸಕ್ರಿಯರಾಗಿರುವ ಪರಮ್ ಗುಬ್ಬಿ ನಿರ್ದೇಶನ ಮಾಡಿದ್ದಾರೆ. ಚಿತ್ರಕಥೆ–ಸಂಭಾಷಣೆ–ಸಾಹಿತ್ಯ ಕಬ್ಬಡಿ ನರೇಂದ್ರ ಬಾಬು, ಸಂಗೀತ ಅತಿಶಯಜೈನ್, ಛಾಯಾ




ಗ್ರಹಣ ಶಾಂತರಾವ್ ಇಪಿಲಿ, ಸಂಕಲನ ಧನುಷ್ ವೀರ್, ಕಲೆ ಬಾಬು ಖಾನ್, ನೃತ್ಯ ನಂದ ಅವರದ್ದಾಗಿದೆ. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾದ ನರಸಿಂಹಲು, ಕರ್ನಾಟಕ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷರಾದ ಉಮೇಶ್ ಬಣಕಾರ್ ಮತ್ತು ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್ ಅವರುಗಳು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಚಿತ್ರದಲ್ಲಿ ನಿರ್ಮಾಪಕರ ಮಗ ಜಿ ಲಿಖಿತ್ ಮತ್ತು ಎರಡು ಶೇಡ್‌ಗಳಲ್ಲಿ ಕಾಣಿಸಿಕೊಂಡಿರುವ ರಂಗಭೂಮಿಯ ಜಯವರ್ಧನ್ ನಾಯಕರುಗಳು. ನಾಯಕಿಯರುಗಳಾಗಿ ಸುಲಕ್ಷ ಖೈರ, ಭೂಮಿಕಗೌಡ. ಇವರೊಂದಿಗೆ ಚಂದ್ರಶೇಖರ ರೆಡ್ಡಿ. ಎ.ಎಂ, ಪ್ರಕಾಶ್‌ಮೂರ್ತಿ, ಕುಮಾರಿ ಸ್ವರ್ಣ, ಶೃತಿ, ದಿನಮಣಿ, ಕಾವ್ಯ ಕುಮಾರಿ ಮುಂತಾದವರು ಅಭಿನಯಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಚಿತ್ರದ ನಿರ್ದೇಶಕರಾದ ಪರಮ್ ಗುಬ್ಬಿಯವರು ಸಾಹಿತಿ ಕೆ. ಸದಾಶಿವ ವಿರಚಿತ ಸಣ್ಣಕತೆಗಳಲ್ಲಿ ಒಂದಾದ 'ಮತ್ತೆ ಮಳೆ ಹೊಯ್ಯುತಿದೆ' ಕೃತಿಯನ್ನು ಬಳಸಲಾಗಿದೆ. ಕತೆ ಇಷ್ಟ ಆದ ಕಾರಣ ಲೇಖಕರ ಅನುಮತಿ ಪಡೆಯಲು ಹೋದಾಗ ಅವರು ಮತ್ತು ಅವರ ಕುಟುಂಬ ಕಾಲವಾಗಿದ್ದರೆಂದು ತಿಳಿಯಿತು. ಆದರೆ ಮಗಳು ಮಾತ್ರ ಅಮೇರಿಕಾದಲ್ಲಿ ನೆಲೆಸಿದ್ದಾರೆಂದು ತಿಳಿದು ಅವರಿಂದ ಅನುಮತಿ ಪಡೆದು ಕೊಳ್ಳಲಾಯಿತು. ಉದ್ಯಮಕ್ಕೆ ಕೊಂಡಿ ಆಗಿರುವ ಕನ್ನಡ ಸಾಹಿತ್ಯ ಪರಿಷತ್ ಅನ್ನು ಸಂಪರ್ಕಿಸಿ ಅವರಿಗೆ ನೀಡ ಬಹುದಾದ ಸಂಭಾವನೆ ಮೊತ್ತವನ್ನು ಸಾಹಿತ್ಯ ಪರಿಷತ್‌ನಲ್ಲಿ ದತ್ತಿಯಾಗಿ ನೀಡಿ, ಪ್ರತಿ ವರ್ಷ ಕೆ ಸದಾಶಿವ ಹೆಸರಿನಲ್ಲಿ ಯುವ ಬರಹಗಾರರಿಗೆ ಪ್ರಶಸ್ತಿ ನೀಡಲು ನಿರ್ಧರಿಸಿ ಯೋಜನೆ ಬಗ್ಗೆ ನಿರ್ಮಾಪಕರಿಗೆ ತಿಳಿಸಿದಾಗ ಖುಷಿಯಿಂದ ಒಪ್ಪಿಕೊಂಡರು ಎಂದು ತಿಳಿಸಿದರು.

# 'ರೋಲೆಕ್ಸ್' ಮಾತಿನ ಭಾಗದ ಚಿತ್ರೀಕರಣ ಮುಕ್ತಾಯ..

ಮಧು ಫಿಲಂ ಸರ್ಕ್ಯೂಟ್ಸ್ ಸಂಸ್ಥೆ ಲಾಂಛನದಲ್ಲಿ ಅಂಬಟಿ ಮಧು ಮೋಹನಕೃಷ್ಣ ಅವರು ಕನ್ನಡದಲ್ಲಿ ನಿರ್ಮಾಣ ಮಾಡುತ್ತಿರುವ ಮೊದಲ ಚಿತ್ರ "ರೋಲೆಕ್ಸ್". ಈ ಹಿಂದೆ "ಬಿಲ್ ಗೇಟ್ಸ್" ಚಿತ್ರವನ್ನು ನಿರ್ದೇಶನ ಮಾಡಿದ್ದ ವಿ. ಸಿ. ಶ್ರೀನಿವಾಸ್ ಅವರು ಈ ಚಿತ್ರವನ್ನು ನಿರ್ದೇಶಿಸುತ್ತಿದ್ದು, ನಾಯಕನಾಗಿ ಕೋಮಲ್ ಕುಮಾರ್ ನಟಿಸುತ್ತಿದ್ದಾರೆ. ತಮ್ಮ ಅಮೋಘ ಅಭಿನಯದ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ಕೋಮಲ್ ಕುಮಾರ್ ಅವರು "ರೋಲೆಕ್ಸ್" ಚಿತ್ರದಲ್ಲಿ ಡಿಫರೆಂಟ್ ಲುಕ್ ನಲ್ಲಿ ಕಾಣಿಸಿಕೊಂಡಿದ್ದಾರೆ. ಸೋನಾಲ್ ಮೊಂತೆರೊ ನಾಯಕಿಯಾಗಿ ಅಭಿನಯಿಸುತ್ತಿದ್ದಾರೆ. ಕಾಮಿಡಿಯೊಂದಿಗೆ ಕೌಟುಂಬಿಕ ಕಥಾಹಂದರವನ್ನೂ ಹೊಂದಿರುವ ಈ ಚಿತ್ರಕ್ಕೆ ಮಾತಿನ ಭಾಗದ ಚಿತ್ರೀಕರಣ ಹಾಗೂ ಒಂದು ಹಾಡಿನ ಚಿತ್ರೀಕರಣ ಮುಕ್ತಾಯವಾಗಿದೆ. ಎರಡು ಹಾಡುಗಳ ಚಿತ್ರೀಕರಣ ಮುಕ್ತಾಯವಾದರೆ, ಚಿತ್ರ ರಡಿ ಎಂದು ನಿರ್ಮಾಪಕರು ತಿಳಿಸಿದ್ದಾರೆ.




# ಪ್ರೇಮಕಥೆ ಹಿಂದೆ ಕರಿಯಪ್ಪ ಸಾರಥಿ ಕುಮಾರ್..

ಕೆಮಿಸ್ಟ್ರಿ ಆಫ್ ಕರಿಯಪ್ಪ ಸಿನಿಮಾ ಮೂಲಕ ಕನ್ನಡ ಚಿತ್ರರಂಗದಲ್ಲಿ ಭರವಸೆ ಮೂಡಿಸಿರುವ ನಿರ್ದೇಶಕ ಕುಮಾರ್ ಈಗ ಹೊಸ ಸಿನಿಮಾ ಘೋಷಿಸಿದ್ದಾರೆ. ಕುಮಾರ್ ಅವರ ಹೊಸ ಪ್ರಯತ್ನಕ್ಕೆ ಲವ್ ಯೂ ಮುದ್ದು ಎಂಬ ಟೈಟಲ್ ಇಡಲಾಗಿದೆ. ಟೈಟಲ್ ಹೇಳುವಂತೆ ಇದೊಂದು ಪ್ರೇಮಕಥೆ. ಮಹಾರಾಷ್ಟ್ರದಲ್ಲಿ ನಡೆದ ನೈಜ ಪ್ರೇಮಕಥೆಯನ್ನು ಕುಮಾರ್ ಅವರು ಸಿನಿಮಾ ರೂಪಕ್ಕಿಳಿಸಿದ್ದಾರೆ. ಸದ್ಯ ಚಿತ್ರದ ಫಸ್ಟ್ ಲುಕ್ ಬಿಡುಗಡೆ ಮಾಡಲಾಗಿದೆ. ಲವ್ ಯೂ ಮುದ್ದು ಸಿನಿಮಾದಲ್ಲಿ ನಾಯಕನಾಗಿ ಸಿದ್ದು ನಟಿಸುತ್ತಿದ್ದು, ನವನಟಿ ರೇಷ್ಮಾ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ರಾಜೇಶ್ ನಟರಂಗ, ಗಿರೀಶ್ ಶಿವಣ್ಣ, ತಬಲಾ ನಾಣಿ, ಶ್ರೀವತ್ಸ, ಅಪೂರ್ವ ಹಾಗೂ ಉಷಾ ಸೇರಿದಂತೆ ಹಲವರು ತಾರಾಬಳಗದಲ್ಲಿದ್ದಾರೆ. ಈಗಾಗಲೇ ಚಿತ್ರದ ಚಿತ್ರೀಕರಣ ಮುಕ್ತಾಯಗೊಂಡಿದೆ. ಕಿಶನ್ ಎಂಟರ್ ಟೈನ್ಮೆಂಟ್ ಬ್ಯಾನರ್ ನಡಿ ಕಿಶನ್ ಬಂಡವಾಳ ಹೂಡಿದ್ದಾರೆ.












Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212